ಸಂಪುಟ : 9 ಸಂಚಿಕೆ 180 ಪುಟ : 4 ಬೆಲೆ: 3.00 ಶುಕ್ರವಾರ ಆಗಸ್ಟ್ 23 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶೇರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 180 Pages : 4 Price : 3.00 Friday August 23 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಚರಂಡಿಯ ನೀರಿನಿಂದ ಅವಾಂತರ ಸೃಷ್ಟಿ । ಅಂಗಡಿ ಕಟ್ಟೆಯ ಮೇಲೆ ಮಕ್ಕಳಿಗೆ ಪಾಠ!

# ನಮ್ಮ ವ್ಯವಸ್ಥೆ ಸುಧಾರಿಸುವುದೆಂದು?!

■ವಿಜಯಸಾಕ್ಷಿ ಸುದ್ದಿ, ಗದಗ

ಬ್ರಿಟಿಷರ ಕಾಲದಲ್ಲಿ ನಿರ್ಮಾಣಗೊಂಡು, 160 ವರ್ಷದ ಇತಿಹಾಸ ಹೊಂದಿರುವ ಗದುಗಿನ ದತ್ತಾತ್ರೇಯ ರಸ್ತೆಯಲ್ಲಿರುವ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರ ಕಟ್ಟಡ ಇಂದಿಗೂ ಸುಸ್ಥಿತಿಯಲ್ಲಿದೆ. ಆದರೆ, ಮಳೆಗಾಲದಲ್ಲಿ ಮಾತ್ರ ಶಾಲಾ ಮಕ್ಕಳು ಶಾಲೆ ಪ್ರವೇಶಿಸಲೂ ಆಗದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಕಾರಣ, ಶಾಲೆಯ ಎದುರಿನ ರಸ್ತೆ. ಚರಂಡಿ ನೀರು ಶಾಲೆಯ ಆವಾರಕ್ಕೆ ನುಗ್ಗಿ ಮಕ್ಕಳು ಪರದಾಡುವ ಸ್ಥಿತಿ ನಿರ್ಮಾಣವಾಗುತ್ತಿರುವುದು ದುರ್ದೈವ.

ಇದೀಗ, ಮತ್ತೊಮ್ಮೆ ಇಂತಹುದೇ ಘಟನೆ ಮರುಕಳಿಸಿದೆ. ಜೋರು ಮಳೆ ಸುರಿದು, ಚರಂಡಿಗಳೆಲ್ಲಾ ತುಂಬಿ ಹರಿದು, ಇಡಿಯ ಪರಿಸರ ಚರಂಡಿಯ ಗಬ್ಬು ದುರ್ನಾತದಿಂದ ತುಂಬಿಹೋಗಿತ್ತು. ಶಾಲೆಯೊಳಗೆ ಕುಳಿತುಕೊಳ್ಳಲೂ ಸಾಧ್ಯವಾಗದಿದ್ದಾಗ, ಶಿಕ್ಷಕರು ವಿದ್ಯಾರ್ಥಿಗಳನ್ನು ಇದೇ ರಸ್ತೆಯಲ್ಲಿರುವ ಅಂಗಡಿಯ ಕಟ್ಟೆಯ ಮೇಲೆ ಕೂರಿಸಿ ಪಾಠ ಮಾಡಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಚರಂಡಿ ಬ್ಲಾಕ್ ಆಗಿ ಶಾಲೆಯ ರಸ್ತೆಯ ಸ್ಥಿತಿ ಅಯೋಮಯವಾಗಿದೆ. ವಿದ್ಯಾರ್ಥಿಗಳು ಶಾಲೆಯೊಳಗೆ ಪ್ರವೇಶಿಸಲೂ ಆಗದಂತಹ ಸಂದರ್ಭ ಮಳೆಗಾಲದಲ್ಲಿ ಎದುರಾಗುತ್ತದೆ. ಆದರೆ, ಮಕ್ಕಳನ್ನು ರಸ್ತೆಯ ಪಕ್ಕದ ಅಂಗಡಿಯ ಮೆಟ್ಟಿಲುಗಳ ಮೇಲೆ ಕೂರಿಸಿ ಪಾಠ ಮಾಡಿರುವುದು ಎಷ್ಟು ಸರಿ? ಇದರಿಂದ ಮಕ್ಕಳಿಗೇನಾದರೂ ತೊಂದರೆಯಾದರೆ ಯಾರು ಜವಾಬ್ದಾರಿ ಹೊರಬೇಕು ಎಂದು ಸಾರ್ವಜನಿಕರು ಶಿಕ್ಷಕರ ಬೇಜವಾಬ್ದಾರಿಗೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.





ಪ್ರತೀ ಮಳೆಗಾಲದಲ್ಲೂ ಚರಂಡಿ ತುಂಬಿ ಇದೇ ಸ್ಥಿತಿ ನಿರ್ಮಾಣವಾಗುತ್ತಿದೆ. ಮಳೆ ನೀರು ಚರಂಡಿ ತುಂಬಿ ಶಾಲೆಯ ಆವರಣಕ್ಕೆ ನುಗ್ಗಿ, ವಿದ್ಯಾರ್ಥಿಗಳು ಕೂತು ಪಾಠ ಕೇಳಲೂ ಆಗದಂತಹ ದುರ್ವಾಸನೆ ಹರಡುತ್ತದೆ. ಶಾಲಾ ಮಕ್ಕಳಿಗೆ ಆಗುತ್ತಿರುವ ಸಮಸ್ಯೆಯ ಬಗ್ಗೆ ಹಲವಾರು ಬಾರಿ ಶಿಕ್ಷಣ ಇಲಾಖೆಗೆ ಹಾಗೂ ನಗರಸಭೆ ಅಧಿಕಾರಿಗಳ ಗಮನಕ್ಕೆ ತರಲಾಗಿದೆ. ಆದರೂ ಅಧಿಕಾರಿಗಳ ನಿರ್ಲಕ್ಷ್ಯದಿಂದ ಶಾಲಾ ಮಕ್ಕಳ ಪರದಾಟ ತಪ್ಪದಾಗಿದೆ.

ಈ ವಿಚಾರ ತಿಳಿಯುತ್ತಿದ್ದಂತೆ ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ರಸ್ತೆಯಲ್ಲಿ ಪಾಠ ಕೇಳುತ್ತಿದ್ದ ಮಕ್ಕಳನ್ನು ನೋಡಿ ಕೆಂಡಾಮಂಡಲವಾದರು. ತಕ್ಷಣ ಮಕ್ಕಳನ್ನು ಪಕ್ಕದಲ್ಲಿರುವ ಸರ್ಕಾರಿ ಶಾಲೆಗೆ ಸ್ಥಳಾಂತರಿಸಿ, ನಗರಸಭೆ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸುವ ಭರವಸೆ ನೀಡಿದರು.

ಪ್ರತೀ ಬಾರಿ ಇದೇ ಸಮಸ್ಯೆ ಎದುರಾಗುತ್ತಿದ್ದರೂ, ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಆಗುತ್ತಿರುವ ಅನಾನುಕೂಲವನ್ನು ಸರಿಪಡಿಸಲು ಮುಂದಾಗಿದ್ದರೆ ಇಂತಹ ಸಮಸ್ಯೆ ಮರುಕಳಿಸುತ್ತಿರಲಿಲ್ಲ. ಇನ್ನಾದರೂ ಅಧಿಕಾರಿಗಳು ಎಚ್ಚೆತ್ತು, ಚರಂಡಿ ನೀರು ಶಾಲೆಗೆ ನುಗ್ಗದಂತೆ ಕ್ರಮ ಕೈಗೊಳ್ಳಲಿ ಎಂಬ ಅಭಿಪ್ರಾಯ ಸ್ಥಳೀಯರಿಂದ ವ್ಯಕ್ತವಾಗಿದೆ.



## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 23ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ

ವಾರ್ಡ್ ನಂ. 22 ಪವಾರ ಲೈನ್, ಯಲ್ಲಮ್ಮನ ಗುಡಿ ಲೈನ್, ದಖನಿಯವರ ಲೈನ್ ಕೆಲವು ಉಳಿದ ಭಾಗಗಳು. ವಾರ್ಡ್ ನಂ. 30, 34 ವಡ್ಡರಗೇರಿ, ಮೂರು ಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, 1ನೇ ಕ್ರಾಸ್, ಶಿವಾನಂದ ಗಾರ್ಡನ್, ಬಸವೇಶ್ವರ ಶಾಲೆ, ಹುಡ್ಕೋ ಕೆಲವು ಭಾಗಗಳು.

ವಾರ್ಡ್ ನಂ. 26 ಮಾಳೆಕೊಪ್ಪ ಮಠ ಸಂಧಿ, ಹಳೆ ಬಸ್ ಸ್ಟ್ಯಾಂಡ್, ದನದ ದವಾಖಾನೆ ಲೈನ್, ಮಾರ್ಕೆಟ್, ಉರ್ದು ಶಾಲೆಯ ಹಿಂದಿನ ಭಾಗಗಳು. ವಾರ್ಡ್ ನಂ. 29 ಚಂದಾವರಿಯವರ ಲೈನ್, ಪಂಚಾಕ್ಷರಿ ನಗರ 2, 3ನೇ ಕ್ರಾಸ್. ವಾರ್ಡ್ ನಂ. 6 ಬಾಳಿಕಾಯಿ, ಹೊನ್ನಪ್ಪ, ಪಾಟೀಲ, ರೇಣುಕಾಚಾರ್ಯ ಮಠ, ಹನುಮಂತ ದೇವರ ಗುಡಿ. ವಾರ್ಡ್ ನಂ. 1 ಎಸ್ ಎಮ್ ಕೃಷ್ಣ ನಗರ ಪೂರ್ತಿ ಭಾಗಗಳು.

ನಂ. 16, 21 ಹುಲಿಗೆಮ್ಮ ದೇವಿ ಗುಡಿ, ಕೊಟ್ಟೂರ, ಗೌಳಿ ಲೈನ್ ಗುಡದೂರ ಸ್ವಾಮಿ ಮಠ, ಕುಂಬೇಶ್ವರ ನಗರ, ರಹಮತ್ ನಗರ 4ಭಾಗಗಳು, ಶರೀಫ್ ಅಜ್ಜನ ಗದ್ದುಗೆ, ಖಾನ ತೋಟ. ವಾರ್ಡ್ ನಂ. 5 ಶಿವನಾಗ ನಗರ 4 ಭಾಗಗಳು, ಗಣೇಶ ನಗರ 4 ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರೊಬೇಷನರ್ಸ ಗ್ರೂಪ್ ಎ ಮತ್ತು ಬಿ ವೃಂದದ ಹುದ್ದೆಗಳ ಪೂರ್ವಭಾವಿ ಪರೀಕ್ಷೆಗಳ ಸಭೆ

# ವ್ಯವಸ್ಥಿತ ಪರೀಕ್ಷೆಗಾಗಿ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಆಗಸ್ಟ್ 27ರಂದು ಕರ್ನಾಟಕ ಲೋಕಸೇವಾ ಆಯೋಗದಿಂದ 2023-24ನೇ ಸಾಲಿನ ಗೆಜೆಟೆಡ್ ಪ್ರೋಬೇಷನರ್ಸ್ ಗ್ರೂಪ್ ಎ ಮತ್ತು ಬಿ ವೃಂದದ ಹುದ್ದೆಗಳ ಪೂರ್ವಭಾವಿ ಪರೀಕ್ಷೆಗಳು ಜರುಗಲಿದ್ದು, ಪರೀಕ್ಷೆಗಳನ್ನು ಪಾರದರ್ಶಕವಾಗಿ, ಯಾವುದೇ ಅವ್ಯವಹಾರಗಳಿಗೆ ಆಸ್ಪದ ನೀಡದೇ ಸುವ್ಯವಸ್ಥಿತವಾಗಿ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು.

ಜಿಲ್ಲಾದಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರೋಬೇಷನರ್ಸ್ ಗ್ರೂಪ್ ಎ ಮತ್ತು ಬಿ ವೃಂದದ ಹುದ್ದೆಗಳ ಪೂರ್ವಭಾವಿ ಪರೀಕ್ಷೆಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳು ಅಚ್ಚುಕಟ್ಟಾಗಿ ನಡೆಯಲು ಜಿಲ್ಲಾಮಟ್ಟದ ತ್ರಿ-ಸದಸ್ಯ ಸಮಿತಿಯನ್ನುವೀಕ್ಷಕರನ್ನು, ಸ್ಥಳೀಯ ನಿರೀಕ್ಷಣಾಧಿಕಾರಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಕ ಮಾಡಲಾಗಿದ್ದು, ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು. ಪ್ರಶ್ನೆ ಪತ್ರಿಕೆ ಹಾಗೂ ಉತ್ತರ ಪತ್ರಿಕೆಗಳನ್ನು ಕೊಂಡೊಯ್ಯುವ ಸಮಯದಲ್ಲಿ ಉಸ್ತುವಾರಿ ತಂಡಕ್ಕೆ ಅಗತ್ಯ ಬಂದೋಬಸ್ತ್ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.



ಪರೀಕ್ಷೆಗಳು ಸುಗಮವಾಗಿ ಜರುಗುವ ಮತ್ತು ಶಿಸ್ತು, ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಅಂದು ಬೆಳಿಗ್ಗೆ 8ರಿಂದ ಸಾಯಂಕಾಲ 6 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ.

ಕರ್ನಾಟಕ ಲೋಕಸೇವಾ ಆಯೋಗವು ಅಭ್ಯರ್ಥಿಗಳ ಪ್ರವೇಶ ಪತ್ರದಲ್ಲಿ ತಿಳಿಸಿರುವ ವಸ್ತ್ರ ಸಂಹಿತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಪಾಲಿಸಬೇಕು. ಆಯೋಗವು ನಿಗದಿಪಡಿಸಿರುವ ಸೂಚನೆಗಳನ್ನು ಸಂಬಂಧಪಟ್ಟವರು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಪಾಲಿಸತಕ್ಕದ್ದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾತನಾಡಿ, ಪರೀಕ್ಷೆಗಳು ಪಾರದರ್ಶಕವಾಗಿ ಜರುಗಬೇಕು ಎನ್ನುವ ಹಿತದೃಷ್ಟಿಯಿಂದಲೇ ಪರೀಕ್ಷಾರ್ಥಿಗಳನ್ನು ಕಟ್ಟುನಿಟ್ಟಾಗಿ ತಪಾಸಣೆಗೊಳಪಡಿಸಲಾಗುತ್ತದೆ. ಪರೀಕ್ಷಾ ಕೊಠಡಿಯಿಂದ ಯಾವುದೇ ಪ್ರಶ್ನೆ ಪತ್ರಿಕೆ / ಓಎಂಆರ್ ಉತ್ತರ ಹಾಳೆ/ಪ್ರಶ್ನೆ ಸಹಿತ ಉತ್ತರ ಪುಸ್ತಿಕೆ ಹೊರಹೋಗದಂತೆ ಜಾಗೃತೆ ವಹಿಸಿ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿ ಎ.ಎ. ಕಂಬಾಳಿಮಠ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ, ಪರೀಕ್ಷಾ ಕಾರ್ಯಕ್ಕೆ ನಿಯೋಜಿತರಾಗಿರುವ ಅಧಿಕಾರಿಗಳು, ಮೇಲ್ವಿಚಾರಕರು, ಸಮನ್ವಯ ಅಧಿಕಾರಿಗಳು ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ತಹಸೀಲ್ದಾರ ಕಚೇರಿಗೆ ದಿಢೀರ್ ಭೇಟಿ ನೀಡಿದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ

## ದಾಖಲಾತಿ ಕೊಠಡಿಗಳಿಗೆ ಭದ್ರತೆ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ದಾಖಲಾತಿಯಿರುವ ಕೊಠಡಿಗಳಿಗೆ ಅಗತ್ಯ ಭದ್ರತೆಯಿರಬೇಕು. ಇಲ್ಲಿ ನೋಡಿದರೆ ಏನೂ ಇದ್ದಂತಿಲ್ಲ. ಇಂತಹ ನಿಷ್ಕಾಳಜಿಯನ್ನು ಸಹಿಸಲು ಸಾದ್ಯವಿಲ್ಲ. ಕೂಡಲೇ ಸಿಸಿ ಕ್ಯಾಮೆರಾ ಅಳವಡಿಸಿ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸರ್ವೇ ಇಲಾಖೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಜಿಲ್ಲಾಧಿಕಾರಿ ಗೋವಿಂದ ರೆಡ್ಡಿರವರು ರೋಣ ತಹಸೀಲ್ದಾರ್ ಕಚೇರಿಗೆ ದಿಢೀರ್ ಭೇಟಿ ನೀಡಿ, ಕಚೇರಿಯ ವಿವಿದ ಕೊಠಡಿಗಳ ವಸ್ತುಸ್ಥಿತಿಯ ಪರಿಶೀಲನೆ ನಡೆಸಿದರು.

ಸರ್ವೇ ಇಲಾಖೆಯಲ್ಲಿ ಮಹತ್ವದ ದಾಖಲಾತಿಗಳಿರುತ್ತವೆ ಎನ್ನುವುದನ್ನು ಕಾರ್ಯನಿರ್ವಹಿಸುವ ಅಧಿಕಾರಿಗಳಾಗಲಿ ಅಥವಾ ಸಿಬ್ಬಂದಿಗಳಾಗಲಿ ಮರೆಯಬಾರದು. ಯಾರಾದರೂ ಬಂದು ಯಾವುದಾದರೂ ದಾಖಲೆಯನ್ನು ಹಿಡಿದುಕೊಂಡು ಹೋದರೇನು ಮಾಡುತ್ತೀರಿ? ಕಚೇರಿಯ ಒಳಗಿರುವವರು ಸಿಬ್ಬಂದಿಗಳೇ ಎಂದು ಪ್ರಶ್ನಿಸುತ್ತಿದ್ದಂತೆ ಹೌದು ಎಂದು ಸಿಬ್ಬಂದಿ ಮಡಿವಾಳರ ಹೇಳಿದಾಗ, ಕಚೇರಿಯಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಸಿದರು.



ಮಿನಿ ವಿಧಾನಸೌಧದ ಬಹುತೇಕ ಕೊಠಡಿಗಳು ಭಾರೀ ಪ್ರಮಾಣದಲ್ಲಿ ಬಿರುಕು ಬಿಟ್ಟಿರುವುದನ್ನು ವೀಕ್ಷಿಸಿದ ಜಿಲ್ಲಾಧಿಕಾರಿಗಳು, ಇಂತಹ ಕೊಠಡಿಗಳಲ್ಲಿ ಕೆಲಸ ನಿರ್ವಹಿಸದಿರಲು ತಹಸೀಲ್ದಾರ ಕೆ. ನಾಗರಾಜ್‌ರವರಿಗೆ ಸೂಚಿಸಿದರು. ಬಿರುಕು ಬಿಟ್ಟ ಕೊಠಡಿಗಳ ಬಗ್ಗೆ ವರದಿ ಸಲ್ಲಿಸಿ ಎಂದ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ದಾಖಲಾತಿ ಕೊಠಡಿ ಬಳಿ ಇರುವ ಕೌಂಟರ್ ಸಣ್ಣದಾಗಿಸಿ ಇಲ್ಲದಿದ್ದರೆ ಸಾರ್ವಜನಿಕರಿಗೆ ತೊಂದರೆಯಾಗುತ್ತದೆ ಎಂದರು.

ಜಿಲ್ಲಾಧಿಕಾರಿಗಳು ಆಗಮಿಸಿದ ಸಂದರ್ಭದಲ್ಲಿ, ನಮ್ಮ ಜಮೀನಿಗೆ ತೆರಳಲು ದಾರಿ ಬಿಡುವುದಿಲ್ಲ ಎನ್ನುತ್ತಿದ್ದಾರೆ. ನಮಗೆ ದಾರಿ ಕೊಡಿಸಿ ಎಂದು ರೈತರೊಬ್ಬರು ಅಳಲು ತೊಡಿಕೊಂಡರು. ಈ ಬಗ್ಗೆ ದಾಖಲಾತಿಗಳನ್ನು ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ನಕ್ಷೆಯಲ್ಲಿ ಇದ್ದರೆ ಮಾತ್ರ ನಾವು ದಾರಿ ಕೊಡಿಸುತ್ತೇವೆ, ಇಲ್ಲದಿದ್ದರೆ ನಿವೇ ಸ್ಥಳೀಯವಾಗಿ ಬಗೆಹರಿಸಿಕೊಳ್ಳಬೇಕು ಎಂದರು.

ಈ ಸಂಧರ್ಭದಲ್ಲಿ ತಹಸೀಲ್ದಾರ್ ನಾಗರಾಜ ಕೆ, ಉಪತಹಸೀಲ್ದಾರ ಜೆ.ಟಿ. ಕೊಪ್ಪದ, ಮುಖ್ಯಾಧಿಕಾರಿ ಹೊಸಮನಿ ಸೇರಿದಂತೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ರಾಜ್ಯಪಾಲರ ಸಿಎಂ ವಿರುದ್ಧದ ಪ್ರಾಸಿಕ್ಯೂಶನ್ ಆದೇಶ ಹಿಂಪಡೆಯಲು ಆಗ್ರಹ

## ಬ್ಲಾಕ್ ಕಾಂಗ್ರೆಸ್ ವತಿಯಿಂದ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಶನ್ ಆದೇಶ ನೀಡಿದ್ದನ್ನು ಖಂಡಿಸಿ ಮತ್ತು ಆದೇಶವನ್ನು ಹಿಂಪಡೆಯುವಂತೆ ಆಗ್ರಹಿಸಿ ಗುರುವಾರ ಶಿರಹಟ್ಟಿಯಲ್ಲಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಮುಡಾ ವಿಚಾರಣೆಯಲ್ಲಿ ರಾಜ್ಯ ಹಾಗೂ ಕೇಂದ್ರ ಬಿಜೆಪಿ ನಾಯಕರ ಸೂಚನೆ ಮೇರೆಗೆ ತನಿಖೆಗೆ ಆದೇಶ ಮಾಡಿರುವುದು ಅಸಂವಿಧಾನಿಕವಾಗಿದೆ. ಕೂಡಲೇ ರಾಜ್ಯಪಾಲರು ಈ ಆದೇಶವನ್ನು ರದ್ದುಪಡಿಸಬೇಕು. ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರ ಸೂಚನೆ ಮೇರೆಗೆ ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದು ಖಂಡನೀಯ. ರಾಜ್ಯದಲ್ಲಿ ಚುನಾಯಿತ ಸರಕಾರವನ್ನು ಅಸ್ಥಿರಗೊಳಿಸಲು ಪ್ರತಿಪಕ್ಷಗಳು ಪ್ರಯತ್ನ ಮಾಡುತ್ತಿವೆ ಎಂದರು.



ಮಾಜಿ ಶಾಸಕರಾದ ಜಿ.ಎಸ್. ಗಡ್ಡದ್ದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ಉಪಾಧ್ಯಕ್ಷೆ ನೀಲವ್ವ ಹುಬ್ಬಳ್ಳಿ, ದೇವಪ್ಪ ಲಮಾಣಿ, ಡಿ.ಕೆ. ಹೊನ್ನಪ್ಪನವರ, ಎಲ್.ಡಿ. ಪಾಟೀಲ, ಹೊನ್ನೇಶ ಪೋಟಿ, ಮಂಜುನಾಥ ಘಂಟಿ, ಫಕ್ಕೀರೇಶ ಮ್ಯಾಟಣ್ಣನವರ, ಚಾಂದಸಾಬ ಮುಳಗುಂದ, ಮುತ್ತುರಾಜ ಭಾವಿಮನಿ, ಹಮೀದ ಸನದಿ, ಬುಡನಶ್ಯಾ ಮಕಾನದಾರ, ಅಜ್ಜು ಪಾಟೀಲ, ಸಿದ್ದು ಪಾಟೀಲ, ಅಶರತಅಲಿ ಢಾಲಾಯತ, ಮಾಬುಸಾಬ ಲಕ್ಷ್ಮೇಶ್ವರ, ಸಂತೋಷ ಕುರಿ, ಸೋಮನಗೌಡ ಮರಿಗೌಡ, ಮಹಾಂತೇಶ ದಶಮನಿ, ಮಹೇಂದ್ರ ಉಡಚಣ್ಣವರ, ದೇವಪ್ಪ ಬಟ್ಟೂರ, ಈರಣ್ಣ ಚವ್ಹಾಣ, ಜಗದೀಶ ಇಟ್ಟೇಕಾರ, ನಜೀರ ಡಂಬಳ ಮುಂತಾದವರು ಉಪಸ್ಥಿತರಿದ್ದರು.

ಕಾಂಗ್ರೆಸ್ ಮುಖಂಡ ಗುರುನಾಥ ದಾನಪ್ಪನವರ ಮಾತನಾಡಿ, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದಲ್ಲಿ 6 ಜನ ದಲಿತ ಮುಖಂಡರು ಸಚಿವರಾಗಿದ್ದಾರೆ. 5ಕ್ಕೂ ಹೆಚ್ಚು ಅಲ್ಪಸಂಖ್ಯಾತ ಮುಖಂಡರು ಸಚಿವರಾಗಿದ್ದಾರೆ. ಬಿಜೆಪಿ ಸರಕಾರ ಇದ್ದಾಗ ಓರ್ವ ದಲಿತ ವ್ಯಕ್ತಿ ಮಾತ್ರ ಸಚಿವರಾಗಿದ್ದರು. ಸಿಎಂ ಸಿದ್ದರಾಮಯ್ಯ ಎಲ್ಲ ಜಾತಿ, ಜನಾಂಗದವರ ನಾಯಕರಾಗಿ ಹೊರಹೊಮ್ಮಿದ್ದಾರೆ. ಇಂತಹವರ ಮೇಲೆ ಪ್ರಾಸಿಕ್ಯೂಶನ್‌ಗೆ ಆದೇಶ ನೀಡಿರುವುದು ಸರಿಯಲ್ಲ ಎಂದರು.

## ಸಂಪಾದಕೀಯ

# ಜನಗಣತಿ ಇಂದಿನ ಅನಿವಾರ್ಯ

ದೇಶದಲ್ಲಿ ಪ್ರತಿ 10 ವರ್ಷಕ್ಕೊಮ್ಮೆ ನಡೆಯಬೇಕಿರುವ ಜಾತಿ ಜನಗಣತಿಗೆ ಈ ವರ್ಷ ಆರಂಭವಾಗುವ ಲಕ್ಷಣಗಳು ಗೋಚರಿಸುತ್ತಿವೆ. ಎರಡ್ಮೂರು ತಿಂಗಳಲ್ಲಿ ಜನಗಣತಿಗೆ ಕೇಂದ್ರ ಸರಕಾರ ಮುಂದಾಗಲಿದೆ. ಆ ಮೂಲಕ ದೇಶದ ಜನಸಂಖ್ಯೆಯ ಪ್ರಮುಖ ದತ್ತಾಂಶವನ್ನು ಕ್ರೂಢೀಕರಿಸಲು ಕೇಂದ್ರ ಸರಕಾರ ಮುಂದಾಗಿದೆ.

2011ರಲ್ಲಿ ಜನಗಣತಿ ನಡೆದಿತ್ತು. ಅದಾದ ನಂತರ 2021ರಲ್ಲಿ ನಡೆಯಬೇಕಿತ್ತು. ಆದರೆ ಕೋವಿಡ್ ಸಂಕಷ್ಟದ ಕಾರಣ ಜನಗಣತಿ ಕಾರ್ಯ ಕೈಗೂಡಲಿಲ್ಲ. 2022ರ ನಂತರ ಕೇಂದ್ರ ಸರಕಾರಕ್ಕೆ ಯಾವುದೇ ಸಂಕಷ್ಟ ಇರದಿದ್ದರೂ ಜನಗಣತಿ ವಿಷಯಕ್ಕೆ ಕೈಹಾಕುವ ಕೆಲಸಕ್ಕೆ ಮುಂದಾಗಲಿಲ್ಲ. ಇದರಿಂದ ಕೇಂದ್ರ ಸರಕಾರ ಅನೇಕ ಟೀಕೆ ಟಿಪ್ಪಣಿಗಳನ್ನು ಎದುರಿಸಬೇಕಾಯಿತು.

ಸದ್ಯ ಎನ್ ಡಿಎ ಮೈತ್ರಿಕೂಟದ 3ನೇ ಅವಧಿಯಲ್ಲಾದರೂ ಜನಗಣತಿಗೆ ಮುಂದಾಗಿರುವುದು ಸ್ವಾಗತಾರ್ಹ ವಿಷಯ. ಜನಗಣತಿ ವಿಷಯದಲ್ಲಿ ಕೇಂದ್ರ ಸರಕಾರ ಉದಾಸೀನ ಮಾಡದೆ ಕೈಗೊಳ್ಳಬೇಕು. ಈ ಬಾರಿ ತಂತ್ರಜ್ಞಾನ ಬಳಸಿಕೊಂಡು ದೇಶವಾಸಿಗಳ ಕುರಿತಾದ ಸಮಗ್ರ ದತ್ತಾಂಶ ಸಂಗ್ರಹಣೆ ಆಗಬೇಕು. ಈ ಎಲ್ಲ ಪ್ರಕ್ರಿಯೆ ನಡೆಯಲು ಕನಿಷ್ಠ 2 ವರ್ಷವಾದರೂ ಬೇಕು. ಹೀಗಾಗಿ ಸರಕಾರ ಈ ವಿಷಯದಲ್ಲಿ ಎಷ್ಟು ಬೇಗ ಕಾರ್ಯಾರಂಭ ಮಾಡುತ್ತದೆ, ಅಷ್ಟು ಬೇಗ ದತ್ತಾಂಶ ಕ್ರೂಢೀಕರಣ ಸಾಧ್ಯವಾಗುತ್ತದೆ.

ಜನಗಣತಿಯಿಂದ ಕೇವಲ ಜನಸಂಖ್ಯೆ ಒಂದನ್ನೆ ಅಳೆಯಲಾಗುತ್ತದೆ ಎನ್ನಲಾಗುವುದಿಲ್ಲ. ಶೈಕ್ಷಣಿಕ, ಆರ್ಥಿಕ, ಸಾಮಾಜಿಕ ಸ್ಥಿತಿಗತಿಗಳ ಮಾಹಿತಿಯೂ ಅದರಲ್ಲಿ ಅಡಕವಾಗಿರುತ್ತದೆ. ಆದರೆ ಸದ್ಯ ದೇಶದಲ್ಲಿ ಜನಗಣತಿ ಎಂದರೆ ಭಾರತದ ಜನಸಂಖ್ಯೆಯನ್ನು ಅಂದಾಜಿಸುವುದಷ್ಟೆ ಸೀಮಿತಗೊಳಿಸಲಾಗಿದೆ. ಕೇವಲ ಜನಸಂಖ್ಯೆಯನ್ನು ನಿಖರವಾಗಿ ತಿಳಿಯುವ ಪ್ರಯತ್ನಗಳಿಂದ ಯಾವುದೇ ಪ್ರಯೋಜನವಿಲ್ಲ. ಜನಸಂಖ್ಯೆ ತಿಳಿಯುವುದು ಅತ್ಯವಶ್ಯಕ. ಆದರೆ ಅದೊಂದೇ ಕಾರಣಕ್ಕೆ ಈ ಜನಗಣತಿ ನಡೆಯುವುದಿಲ್ಲ.

ಜನಗಣತಿ ಆಧರಿಸಿ ಕೇಂದ್ರ ಸರಕಾರ ಯೋಜನೆಗಳನ್ನು ಜಾರಿಗೊಳಿಸುತ್ತದೆ. ಅರ್ಹರಿಗೆ ಯೋಜನೆಯ ಲಾಭ ದೊರೆಯಬೇಕಾದರೆ ಸರಕಾರದ ಬಳಿ ಸ್ಪಷ್ಟ ದತ್ತಾಂಶ ಬೇಕೇ ಬೇಕು. ಆ ಕಾರಣಕ್ಕಾಗಿ ಜನಗಣತಿ ನಡೆಯಬೇಕು. ಮತ್ತು ಅದು ನಿಯಮಿತವಾಗಿ ಪ್ರತಿ 10 ವರ್ಷಕ್ಕೊಮ್ಮೆ ನಡೆಯುವಂತೆ ಆಗಬೇಕಾಗಿರುವುದು ಅವಶ್ಯಕ.

## ಎ.ಎಸ್. ಮಕಾನದಾರರ 'ಪ್ಯಾರಿ ಪದ್ಯ' ಕಲನ ಸಂಕಲನದ ವಿಮರ್ಶೆ

# ಪ್ಯಾರಿ ಪದ್ಯದ ಒಡಲ ಸಂದೇಶ

'ಪ್ಯಾರಿ ಪದ್ಯ' ಒಂದು ಅದ್ಭುತವಾದ ಶಬ್ದಭಂಡಾರದಿಂದ ಕೂಡಿದ ಪ್ರೇಮಕಾವ್ಯ. ಈ ಪ್ಯಾರಿ ಪದ್ಯ ಓದಿದ ಬಳಿಕ ನಾನು ಈ ಪುಸ್ತಕ ಪರಿಚಯಿಸಿ ಓದಿ ಅರ್ಥೈಸಿಕೊಳ್ಳಲು ಸಲಹೆ ನೀಡಿದ ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ ಅವರಿಗೆ ಧನ್ಯವಾದ ತಿಳಿಸದೇಹೋದರೆ ಖಂಡಿತ ತಪ್ಪಾಗುವುದು. ಹಾಗೆಯೇ ವಸ್ತ್ರದ ಅವರ ಪರಿಚಯವಿಲ್ಲದೆ ಹೋಗಿದ್ದರೆ ಈ ಪುಸ್ತಕ ನನಗೆ ಸಿಗುತ್ತಿತ್ತೋ ಇಲ್ಲವೋ! ಹಾಗಾಗಿ ವಸ್ತ್ರದ ಅವರನ್ನು ಪರಿಚಯಿಸಿದ ವಾಗೀಶ್ ರೇಷ್ಮೆ ಅವರಿಗೂ ನಾನು ಧನ್ಯವಾದ ತಿಳಿಸಲೇಬೇಕು. ಒಂದು ರೀತಿಯಲ್ಲಿ ಈ ಪ್ಯಾರಿ ಪದ್ಯ ಸಿಕ್ಕಿದ್ದು ನನ್ನ ಅದೃಷ್ಟವಲ್ಲದೆ ಮತ್ತಿನ್ನೇನೇನೂ ಅಲ್ಲ.

'ಪ್ಯಾರಿ ಪದ್ಯ' ಬರೆದವರು ಎ.ಎಸ್. ಮಕಾನದಾರರು. ಇವರು ವೃತ್ತಿಯಿಂದ ನ್ಯಾಯಾಲಯದ ಪ್ರಥಮದರ್ಜೆ ಸಹಾಯಕರಾಗಿದ್ದರೂ ತಮ್ಮನ್ನು ಸಾಹಿತ್ಯ ಲೋಕದಲ್ಲಿ ನಿರಂತರ ತೊಡಗಿಸಿಕೊಂಡು ನಮ್ಮೆಲ್ಲರಿಗೂ ಇಂತಹ ಕವನಗಳನ್ನು ನೀಡಿ ಕಾವ್ಯದಾಹ ತೀರಿಸಿ ತೃಪ್ತಿಪಡಿಸುತ್ತಿದ್ದಾರೆ. ಮಕಾನದಾರರು ಹಲವಾರು ಸ್ವತಂತ್ರ ಮತ್ತು ಸಂಪಾದಿತ ಕೃತಿಗಳನ್ನು ಪ್ರಕಟಿಸಿದ್ದು, ಅವುಗಳ ಪೈಕಿ ನಾನು ಓದಿದ ಪ್ಯಾರಿ ಪದ್ಯವೂ ಸಹ ಮಕಾನದಾರರ ಒಂದು ಸ್ವತಂತ್ರ ಕೃತಿ. ಪ್ಯಾರಿ




ಪದ್ಯದ ಕವನಗಳು ಪ್ರೇಮಕಾವ್ಯಗಳಂತಿರುವುದರಿಂದ ಮಕಾನದಾರರು ಪ್ಯಾರಿ ಪದ್ಯಕ್ಕೆ 'ಸಖಿ ಚೆಲ್ಲಿದ ಕಾವ್ಯ ಗಂಧ' ಎನ್ನುತ್ತಾರೆ.

ಪ್ಯಾರಿ ಪದ್ಯದ ಕವನಗಳು ಕೇವಲ ಪ್ರೇಮಕಾವ್ಯಗಳಲ್ಲ. ಅವುಗಳು ಸಮಾಜದ ಜಾಗೃತ ಪಜ್ಞೆಯನ್ನು ಬಡಿದೆಬ್ಬಿಸುವ ಸ್ವ-ತಂತ್ರಗಳಾಗಿವೆ, ಪ್ರತಿಯೊಂದು ಸಾಲುಗಳು ಸುಮ್ಮನೆ ಓದಿದರೆ ಪ್ರೇಮಕಾವ್ಯವಾಗಿಯೇ ಉಳಿಯುತ್ತವೆ. ಆದರೆ ವೈಚಾರಿಕ ಶಕ್ತಿಯೊಂದಿಗೆ ಓದಿದಾಗ ಅವುಗಳು ಒಡಲಿನಲ್ಲಿ ತುಂಬಿಕೊಂಡಿರುವ ಅನೇಕ ಸಂದೇಶಗಳನ್ನು ಸಾರುತ್ತವೆ.

ಪ್ಯಾರಿ ಪದ್ಯ ಎನ್ನುವುದು ಯಾವುದೇ ಬಂಧನಕ್ಕೆ ಒಳಗಾಗದೆ ಕಬರ್, ಚಮ್ಲಾ, ಆಶಿಕ್, ಕಫನ್, ತಲಾಕ್, ಜನಾಜಾ ಹೀಗೆ ಅನೇಕ ಪಾರಿಭಾಷಿಕ ಶಬ್ದಗಳನ್ನ ತುಂಬಿಕೊಂಡು ತನ್ನದೇಯಾದ ವಿಶೇಷತೆಯನ್ನು ಸಾರಿದೆ. ಅಲ್ಲಲ್ಲಿ ಚೆಲ್ಲಿದ ಪಾರಿಭಾಷಿಕ ಶಬ್ದಗಳು ಕೆಲವೊಮ್ಮೆ ಗದ್ದಲವೆಬ್ಬಿಸಿದರೂ ಸಹ ತನ್ನ ಸೌಂದರ್ಯವನ್ನು ಕಾಪಾಡಿಕೊಂಡಿದೆ. ಇನ್ನೊಂದು ವಿಶೇಷವೆಂದರೆ ಇದು ಒಂದೆರಡು ಪುಟ ಓದಿ ಕೇವಲ ಒಂದು ಸಾಲು ಓದದೇ ಮುಂದಿನ ಪುಟ ತೆರೆಯಲು ಬಿಡುವದಿಲ್ಲ. ಅಕ್ಷರಗಳ ಆಕರ್ಷಣೆಯಿಂದ ಓದುಗನನ್ನು ಕಟ್ಟಿಹಾಕಿ ಒಂದಾದನಂತರ ಒಂದರಂತೆ ಓದಿ ಮುಗಿಸುವವರೆಗೂ ಹನಿನೀರು ಕುಡಿಯಲು ಸಹ ಬಿಡುವುದಿಲ್ಲ.

ಪ್ಯಾರಿಪದ್ಯದಲ್ಲಿ ನನ್ನ ಮನಸಿಗೆ ಹತ್ತಿರವಾದ ಕೆಲ ಕವನಗಳು ಹೀಗಿವೆ,

ಇರಿಯಲು ಬಂದ ಕತ್ತಿಗೆ ಮುತ್ತಿಕ್ಕಿದೆ,
ಮುತ್ತಿನ ಮತ್ತಲಿ ಕತ್ತಿ ಮೆತ್ತಗಾಯಿತು.

ಮಕಾನದಾರರು ಪ್ರೀತಿಯ ಅಗಾಧತೆಯನ್ನು ಎತ್ತಿಹಿಡಿದು ಜಗತ್ತಿಗೆ ಪ್ರೀತಿಯ ವಿಶೇಷತೆಯನ್ನು ತಿಳಿಸುತ್ತಿದ್ದಾರೆ. ಹಾಗೆಯೇ ಮತ್ತೊಂದು ಕವಿತೆ,

'ನಿನ್ನ ತುಟಿ ಕೊಳಲಾಗಿಸು,
ಪ್ರತಿ ಉಸಿರು ಸ್ವರವಾದೀತು,
ನಗುವ ಬೀಗ ತಾನೇ ತೆರೆದೀತು' ಎಂದು

ಹೇಳುವ ಮೂಲಕ ಎಲುಬಿಲ್ಲದ ನಾಲಿಗೆ ಹೇಗಾದರೂ ನುಡಿಯಲಿ ಆ ಧ್ವನಿ ತುಟಿಯಿಂದ ಹೊರಬೀಳುವಾಗ ಕೊಳಲಿನ ಮಧುರತೆಯಂತಿದ್ದರೆ ಸಾಕು ಮಾತೆಲ್ಲವೂ ಕೇಳುಗರಿಗೆ ಹಿತವೆನಿಸಿ ನಗುವಿನಬೀಗ ಕಳಚುವುದು ಎನ್ನುತ್ತಾರೆ. ಹೀಗೆ ಒಂದೊಂದಾಗಿ ಓದುತ್ತಾ ಅರ್ಥೈಸಿಕೊಳ್ಳುತ್ತಾ ಸಾಗಿದಾಗ ಮುಂದೆ ಸಿಕ್ಕ ಮಕಾನದಾರರ ಮತ್ತೊಂದು ಸುಂದರ ಸಾಲು.

'ಜಗತ್ ಗೆಲ್ಲಾಕ ಅಲೆಕ್ಸಾಂಡರ ಆಗಬೇಕಿಲ್ಲ,
ಜಾತಿ-ಮತ ಬಿಟ್ಟು ಪ್ರೀತಿ ಮಾಡಿದರ ಸಾಕಲ್ಲ'

ಎನ್ನುವ ಮಾತಿನ ಮೂಲಕ ಹತ್ತಿ ಉರಿಯುತ್ತಿರುವ ಕೋಮುಗಲಭೆಗಳನ್ನು ನಂದಿಸಲು ಪ್ರಯತ್ನಿಸಿದ್ದಾರೆ. ಇಂತಹ ಅದ್ಭುತವಾದ ಒಂದು ಕಾವ್ಯವನ್ನು ಓದುವುದು ಓದುಗರ ಭಾಗ್ಯ, ಓದುವ ಆಸಕ್ತಿ ಇದ್ದರೆ ಮೊದಲು ಈ ಪ್ಯಾರಿಪದ್ಯವನ್ನು ನೀವೂ ಸಹ ಒಂದು ಸಾರಿ ಓದಲೇಬೇಕು.



– ಗಣೇಶಗೌಡ ಎನ್. ಪಾಟೀಲ.
ಸಾಸರವಾಡ, ಶಿರಹಟ್ಟಿ.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಡಿಯಲ್ಲಿ 2024-25ನೇ ಸಾಲಿನ ಉದ್ಯೋಗಿನಿ, ಚೇತನ, ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯಡಿ https://sevasindhu.karnataka.gov.in ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 21 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಮುಂಡರಗಿ ಮತ್ತು ನರಗುಂದ ತಾಲೂಕಿನಲ್ಲಿಯ ಶಿಶು ಅಭಿವೃದ್ಧಿ ಯೋಜನೆಯ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ ವೆಬ್‌ಸೈಟ್ https://karnemakaone.kar.nic.in/abcd ರಲ್ಲಿ ತಿಳಿಸಿರುವಂತೆ ಅರ್ಹ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 19 ಕೊನೆಯ ದಿನವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಯ ಪ್ರಕಟಣೆ ತಿಳಿಸಿದೆ.

## ರಾಜನನ್ನು ರಾಜನ ಥರನೇ ನನಗೆ ನೋಡೋಕೆ ಇಷ್ಟ: ರಚಿತಾ ರಾಮ್ ಕಣ್ಣೀರು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ನಟ ದರ್ಶನ್ ಅವರ ಜೈಲು ವಾಸ ಮುಂದುವರಿದಿದೆ. ಹೀಗಾಗಿ ದರ್ಶನ್ ಭೇಟಿಗೆ ಎಲ್ಲರೂ ಪರಪ್ಪನ ಅಗ್ರಹಾರಕ್ಕೆ ಭೇಟಿ ನೀಡಬೇಕಾದ ಸಂದರ್ಭ ಬಂದಿದೆ.

ಗುರುವಾರ ಸ್ಯಾಂಡಲ್‌ವುಡ್ ಡಿಂಪಲ್ ಕ್ವೀನ್ ರಚಿತಾ ರಾಮ್ ಕೂಡ ಪರಪ್ಪನ ಅಗ್ರಹಾರಕ್ಕೆ ತೆರಳಿ, ದರ್ಶನ್ ರನ್ನು ಭೇಟಿಯಾಗಿ ಬಂದಿದ್ದಾರೆ.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದರ್ಶನ್ ಸರ್ ಆರೋಗ್ಯವಾಗಿದ್ದಾರೆ. ಜೈಲಿನಲ್ಲಿ ಅವರನ್ನು ಹಾಗೇ ನೋಡೋಕೆ ಕಷ್ಟ ಆಗುತ್ತಿದೆ. ಎಲ್ಲರೂ ಅವರನ್ನು ತುಂಬಾ ಮಿಸ್ ಮಾಡಿಕೊಳ್ಳುತ್ತಿದ್ದೇವೆ. ಅವರಿಗೆ ಹೇಳಿ ಬಿಟ್ಟು ಬಂದೆ ನಾವೆಲ್ಲರೂ ನಿಮ್ಮ ಬರುವಿಕೆಗಾಗಿ ಕಾಯ್ತಿದ್ದೇವೆ. ಪ್ಲೀಸ್ ಬೇಗ ಬನ್ನಿ ಅಂತ.

ನನಗೆ ಕಾನೂನು ಮೇಲೆ ನಂಬಿಕೆ ಇದೆ. ದರ್ಶನ್ ಸರ್ ಆದಷ್ಟು ಬೇಗ ಹೊರಗೆ ಬರುತ್ತಾರೆ ಎಂದು ನಂಬಿಕೆ ಇದೆ ಎಂದು ರಚಿತಾ ರಾಮ್ ಮಾತನಾಡಿದ್ದಾರೆ.

ರಾಜನನ್ನು ರಾಜನ ಥರನೇ ನನಗೆ ನೋಡೋಕೆ ಇಷ್ಟ. ಇವತ್ತು ಅವರನ್ನು ನೋಡಿ ನಿರಾಳವಾಯತು ಎಂದು ನಟಿ ಭಾವುಕರಾಗಿದ್ದಾರೆ.

ಅವರು ಅಲ್ಲಿ ಆರೋಗ್ಯವಾಗಿ ಆರಾಮ ಆಗಿ ಇದ್ದಾರೆ. ನಾನು ಅವರ ಬ್ಯಾನರ್‌ನಿಂದ ಪರಿಚಯ ಆದವಳು. ನನಗೆ ಇವತ್ತು ಏನೇ ಹೆಸರು ಇದ್ದರೂ ಅದು ಅವರಿಂದ ಸಿಕ್ಕಿದೆ. ಅವರು ಅವತ್ತು ಒಪ್ಪಿಕೊಂಡಿದಕ್ಕೆ ನಾನು ಬಿಂದ್ಯಾ ರಾಮ್‌ನಿಂದ ರಚಿತಾ ರಾಮ್ ಆಗಿ ಬೆಳೆದಿದ್ದು.

ನಾನು ಯಾವಗಲೂ ಅವರ ಕುಟುಂಬಕ್ಕೆ ಆಭಾರಿಯಾಗಿರುತ್ತೇನೆ. ಅವರನ್ನು ನೋಡಿ ನಾನೇ ಕಣ್ಣೀರಿಟ್ಟೆ ಆದರೆ ಅವರೇ ನನಗೆ ಸಮಾಧಾನ ಮಾಡಿದರು. ಅವರು ಆದಷ್ಟು ಬೇಗ ಹೊರಬರಲಿ ಎಂದು ಆ ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.

## ಪ್ರಪ್ರಥಮ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯ ನಿಮಿತ್ತ ವಿಶೇಷ ಲೇಖನ

# ಚಂದ್ರನ ಸ್ಪರ್ಶಕ್ಕೀಗ ಒಂದು ವರ್ಷ

ಕಳೆದ ವರ್ಷ ಇದೇ ದಿನ ಅಂದರೆ, ಆಗಸ್ಟ್ 23ರ ಸಾಯಂಕಾಲ 6 ಗಂಟೆ 03 ನಿಮಿಷಕ್ಕೆ ವಿಕ್ರಮ್ ಹೆಸರಿನ ಲ್ಯಾಂಡರ್, ಪ್ರಜ್ಞಾನ್ ಹೆಸರಿನ ರೋವರ್ ಚಂದ್ರನ ದಕ್ಷಿಣ ಧ್ರುವದ ಮೇಲೆ ಇಳಿದು ಯಶಸ್ಸನ್ನು ಸಾಧಿಸಿದ ಸವಿನೆನಪಿಗಾಗಿ ಆಚರಿಸುವ ವಿಜ್ಞಾನದ ಹಬ್ಬವೇ ಇಂದಿನ 'ಪ್ರಪ್ರಥಮ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ.'

ಭಾರತದಲ್ಲಿ ನಾವು ಆಚರಿಸುತ್ತರುವ ಈ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆ ಭಾರತದ ಇತಿಹಾಸದಲ್ಲಿಯೇ ಮೊದಲ ಸಂಭ್ರಮಾಚರಣೆಯಾಗಿದೆ. ಇಸ್ರೋ ನಡೆಸಿದ ಈ ಚಂದ್ರಯಾನ 3ರ ಯಶಸ್ಸನ್ನು ಕೊಂಡಾಡಿದ ನಮ್ಮ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರು ಪ್ರತಿ ವರ್ಷ ಆಗಸ್ಟ್ 23ರನ್ನು ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯನ್ನಾಗಿ ಆಚರಿಸವಂತೆ ಘೋಷಿಸಿದರು.

ಭಾರತದಂತಹ ದೇಶದಲ್ಲಿ ಸದ್ಯ ಮಾಹಿತಿ ತಂತ್ರಜ್ಞಾನ, ಜಿ.ಪಿ.ಎಸ್, ಜಾಗತಿಕ ದೂರವಾಣಿ ಸಂಪರ್ಕ ವ್ಯವಸ್ಥೆ, ಕೃಷಿ ಆಧಾರಿತ ಆ್ಯಪ್‌ಗಳ ಬಳಕೆಗಾಗಿ, ಜನಸಂಖ್ಯೆ ಅಂದಾಜಿಸಲು, ಅರಣ್ಯ ಆವರಿಸಿದ ಪ್ರದೇಶಗಳನ್ನು ಅಳೆಯಲು, ವಾತಾವರಣದ ಮಾಹಿತಿ, ವಾತಾವರಣದ ವೈಪರಿತ್ಯಗಳ ಮುನ್ಸೂಚನೆ ನೀಡಲು, ಬಾಹ್ಯಾಕಾಶದ ಕುತೂಹಲಗಳನ್ನು ಅರ್ಥೈಸಿಕೊಳ್ಳಲು-ಸಂಶೋಧಿಸಲು, ನಮ್ಮ ಸೌರ ಮಂಡಲದ ಇತರ ಗ್ರಹಗಳಿಗೆ ತಲುಪಿ ನಮ್ಮನ್ನು ನಾವು ತಿಳಿದುಕೊಳ್ಳುವ ಉದ್ದೇಶವಿದೆ.

ಇಸ್ರೋ ನಡೆಸಿದ ಚಂದ್ರಯಾನ ಪ್ರಯೋಗಗಳಲ್ಲಿ ಚಂದ್ರಯಾನ-3 ಸಾಧಿಸಿದ ಯಶಸ್ಸು ಭಾರತಕ್ಕೊಂದು ಮೈಲಿಗಲ್ಲು. ಚಂದ್ರಯಾನ 3ರ ಮೂಲ ಉದ್ದೇಶ ನಮಗೆ ಚಂದ್ರನ ಮೇಲ್ಮೈ, ಅಲ್ಲಿನ ವಾತಾವರಣ ಹಾಗೂ ಚಂದ್ರನ ಆಂತರಿಕ ವ್ಯವಸ್ಥೆಗಳನ್ನು ಅರ್ಥೈಸಿಕೊಳ್ಳುವುದಾಗಿತ್ತು. ಅದನ್ನು ನಾವು ತಕ್ಕ ಮಟ್ಟಿಗೆ ಸಾಧಿಸಿದ್ದೇವೆ ಎಂಬ ತೃಪ್ತಿ ಇದೆ. ಈ ಯೋಜನೆಯು ಅತೀ ಕಡಿಮೆ ವೆಚ್ಚದಲ್ಲಿ



ಯಶಸ್ವಿಯಾಗುವುದರೊಂದಿಗೆ ಚಂದ್ರನ ದಕ್ಷಿಣ ಧ್ರುವದ ಮೇಲೆ ಯಶಸ್ವಿಯಾಗಿ ಸಾಫ್ಟ್ ಲ್ಯಾಂಡಿಂಗ್ ಮಾಡಿ ಭಾರತ ವಿಶ್ವದ ನಂ.1 ರಾಷ್ಟ್ರವಾಗಿದೆ.


ಚಂದ್ರನ ಮೇಲಿಳಿದ ವಿಕ್ರಮನಿಂದ ನಿಧಾನವಾಗಿ ಕೆಳಗಿಳಿದ ಪ್ರಜ್ಞಾನ ರೋವರ್ ಚಂದ್ರನಲ್ಲಿರುವ ಮಣ್ಣು, ಕಲ್ಲು ಮತ್ತು ವಾತಾವರಣದಲ್ಲಿಯ ಆಕ್ಸಿಜನ್, ಹೈಡ್ರೋಜನ್ ಹಾಗೂ ನೀರು, ಹಲವಾರು ಲೋಹಗಳ ಇರುವಿಕೆಯನ್ನು ದೃಢಪಡಿಸಿದೆ. ಈ ಎಲ್ಲ ಸಂಶೋಧನೆಗಳು ಅತೀ ಕಡಿಮೆ ವೆಚ್ಚದಲ್ಲಿ ಅಂದರೆ ಕೇವಲ 630 ಕೋಟಿ ರೂಪಾಯಿಗಳಲ್ಲಿ ಆಗಿರುವುದು ಇನ್ನೊಂದು ಸಾಧನೆ. ಇದೇ ರೀತಿ ಭಾರತವು ಇಸ್ರೋದ ಸಹಾಯದೊಂದಿಗೆ ಬಾಹ್ಯಾಕಾಶ ತಂತ್ರಜ್ಞಾನವನ್ನು ಮುಂದುವರೆಸಿ ಮಾನವನ ಜೀವನವನ್ನು ಇನ್ನಷ್ಟು ಅರ್ಥಪೂರ್ಣವಾಗುವಂತೆ ಮಾಡಲು ಉತ್ತೇಜಿಸುವುದೇ ಇಂದಿನ ಬಾಹ್ಯಾಕಾಶ ದಿನಾಚರಣೆಯ ಮಹತ್ವ ಹಾಗೂ ವಿಶೇಷ.

ಇಸ್ರೋದ ಯಶೋಗಾಥೆಯನ್ನು ಅವಲೋಕಿಸಿದಾಗ, 15ನೇ ಆಗಸ್ಟ್ 1969ರಂದು ವಿಕ್ರಮ ಸಾರಾಭಾಯಿಯವರ ನೇತೃತ್ವದಲ್ಲಿ ಸ್ಥಾಪಿತವಾದ ಇಸ್ರೋದ ಮೊದಲನೇ ಬಾಹ್ಯಾಕಾಶ ಯೋಜನೆಯ ಆರ್.ಎಸ್▯1 ಪ್ರಾಥಮಿಕ ಹಂತದ ಕೃತಕ ಉಪಗ್ರಹವಾಗಿದ್ದರೂ ಇದು ಸೂರ್ಯನಿಂದ ಭೂಮಿಗೆ ತಲುಪುವ ಶಕ್ತಿಯ ವಿಶ್ಲೇಷಣೆ, ಅದರ ಕಾಂತೀಯ ಬಲವನ್ನು, ಅಲ್ಲಿರುವ ತಾಪವನ್ನು ಅಳೆಯುವುದಾಗಿತ್ತು. ಇದನ್ನು ಹಾರಿ ಬಿಟ್ಟಿದ್ದು 18ನೇ ಜುಲೈ 1980ರಂದು.

ವಿಪರ್ಯಾಸ ಎಂಬಂತೆ ಸದ್ಯದ ಯಾವ ಪಠ್ಯ-ಪುಸ್ತಕಗಳಲ್ಲಿ ಬಾಹ್ಯಾಕಾಶ ವಿಜ್ಞಾನ-ತಂತ್ರಜ್ಞಾನ ಕುರಿತು ಪಾಠಗಳಿಲ್ಲ. ಆದ್ದರಿಂದ ಬರುವ ದಿನಮಾನಗಳಲ್ಲಿ ಬಾಹ್ಯಾಕಾಶ ವಿಜ್ಞಾನ ತಂತ್ರಜ್ಞಾನ ಪ್ರಚುರ ಪಡಿಸುವದು ಹಾಗೂ ನಾಗರಿಕರಲ್ಲಿ ಆಸಕ್ತಿ ಬೆಳೆಸುವಂತೆ ಮಾಡುವುದೇ ಇಂದಿನ ದಿನಾಚರಣೆಯ ಪ್ರಾಮುಖ್ಯತೆಯಾಗಿದೆ. ಜತೆಗೆ ಇಸ್ರೋದ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ ವಿಜ್ಞಾನಿಗಳಾದ ಯು.ಆರ್. ರಾವ್, ಎ.ಎಸ್. ಕಿರಣಕುಮಾರ, ಕೋಪ್ಪಿಲಿಲ್ಲಿ ರಾಧಾಕೃಷ್ಣ, ಎ.ಪಿ.ಜೆ. ಅಬ್ದುಲ್ ಕಲಾಂ, ಕೆ. ಕಸ್ತೂರಿರಂಗನ್, ಮಂಗಳಾ ಮಣಿ, ನಂಬಿನಾರಾಯಣ ಇನ್ನೂ ಹಲವಾರು ದಿಗ್ಗಜರನ್ನು ನೆನೆದು ಅವರನ್ನು ಅನುಕರಿಸುವಂತೆ ಯುವಕರಿಗೆ ಪ್ರೇರಣೆ ನೀಡುವುದಾಗಿದೆ.

ಈ ಸಾರೆಯ ರಾಷ್ಟ್ರೀಯ ಬಾಹ್ಯಾಕಾಶ ದಿನಾಚರಣೆಯ ನೀಲನಕ್ಷೆಯನ್ನು 29ನೇ ಜುಲೈ 2023ರಿಂದ 23ನೇ ಆಗಸ್ಟ 2024ರವರೆಗೆ ದೇಶದಾದ್ಯಂತ ಆಚರಿಸಲು ಬೆಂಗಳೂರಿನ ಯು.ಆರ್. ರಾವ್ ಉಪಗ್ರಹ ಕೇಂದ್ರ ಮತ್ತು ಬಿಹಾರದ ಉಡ್ಡಯನ ವ್ಯವಸ್ಥೆಯ ಕೇಂದ್ರ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಪರಿಷತ್‌ನ ಸಹಯೋಗದೊಂದಿಗೆ ನಡೆಸಲು ಸಲಹೆ ನೀಡಲಾಗಿದೆ. ಇವುಗಳಲ್ಲಿ ನುರಿತ ತಜ್ಞರಿಂದ ವಿದ್ಯಾರ್ಥಿಗಳಿಗೆ-ಸಾರ್ವಜನಿಕರಿಗೆ ಬಾಹ್ಯಾಕಾಶ ತಂತ್ರಜ್ಞಾನ ಕುರಿತು ರಸಪ್ರಶ್ನೆ, ಬಾಹ್ಯಾಕಾಶ ವಿಜ್ಞಾನ ವಸ್ತು ಪ್ರದರ್ಶನ, ಚರ್ಚಾ ಸ್ಪರ್ಧೆ ಹಾಗೂ ಉಪನ್ಯಾಸ, ಬಾಹ್ಯಾಕಾಶ ಕುರಿತು ಚಲನಚಿತ್ರ ಪ್ರದರ್ಶನ, ಆಕಾಶ ವೀಕ್ಷಣೆ, ತಾರಾಲಯಗಳ ವಿಕ್ಷಣೆಗಳಂತಹ ಕಾರ್ಯಕ್ರಮಗಳನ್ನು ಆಯೋಜಿಸುವುದಾಗಿದೆ.

ಇಂದು ವಿಜ್ಞಾನ-ತಂತ್ರಜ್ಞಾನ ಕೇವಲ ಹಣಕ್ಕಾಗಿ ಎಂದು ಬಿಂಬಿತವಾಗಿದೆ. ಇದಕ್ಕೆ ಕಾರಣ ಮಾಹಿತಿ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆಯಂತಹ ವಿಜ್ಞಾನ ಶಾಖೆಗಳು ಅತಿಯಾಗಿ ಅಭಿವೃದ್ಧಿ ಹೊಂದುತ್ತಿರುವುದು. ಆದರೆ, ಇವುಗಳ ಅಭಿವೃದ್ಧಿಗೆ ಬೇಕಾದ ಅಂತರ್ಜಾಲ ವ್ಯವಸ್ಥೆ ನಿರ್ವಹಿಸುತ್ತಿರುವ ಕೃತಕ ಉಪಗ್ರಹಗಳು ಬಾಹ್ಯಾಕಾಶ ತಂತ್ರಜ್ಞಾನ ವಿಜ್ಞಾನದ ಕೊಡುಗೆ ಎಂಬುದನ್ನು ನಾವು ಮರೆಯುತ್ತಿದ್ದೇವೆ.



**– ರಾಮಚಂದ್ರ ಮೋನೆ**
ವಿಜ್ಞಾನ ಶಿಕ್ಷಕರು,
ವಿದ್ಯಾದಾನ ಸಮಿತಿ ಬಾಲಕರ ಪ್ರೌಢಶಾಲೆ-ಗದಗ.

## ಕಾಂಗ್ರೆಸ್ ಶಾಸಕರ ಪುತ್ರನ ಹತ್ಯೆಗೆ ಜೈಲಿನಿಂದಲೇ ನಡೆದಿತ್ತಾ ಸ್ಕೆಚ್: ಆಘಾತಕಾರಿ ಮಾಹಿತಿ ಲೀಕ್!

■ ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ

ಕಾಂಗ್ರೆಸ್ ಶಾಸಕರ ಪುತ್ರನ ಹತ್ಯೆಗೆ ಜೈಲಿನಿಂದಲೇ ಸ್ಕೆಚ್ ನಡೆದಿದ್ದು, ಸ್ವಲ್ಪದರಲ್ಲೇ ಬಚಾವ್ ಆಗಿರುವ ಘಟನೆ ನಡೆದಿದೆ.

ಜಿಲ್ಲೆಯ ಭದ್ರಾವತಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಬಿ.ಕೆ.ಸಂಗಮೇಶ್ವರ ಅವರ ಪುತ್ರ ಬಸವೇಶನ ಹತ್ಯೆಗೆ ಸಂಚು ರೂಪಿಸಲಾಗಿದೆ.

ಜೈಲಿನಲ್ಲಿರುವ ಆರೋಪಿ ಡಿಚ್ಚಿ ಮುಬಾರಕ್ ಎನ್ನುವಾತಲೇ ಬಸವೇಶನ ಹತ್ಯೆಗೆ ಸುಫಾರಿ ನೀಡಿದ್ದು, ಭದ್ರಾವತಿ ಗಾಂಧಿ ಸರ್ಕಲ್ ನಲ್ಲಿ ಕೊಲೆ ಮಾಡಲು ಸೂಚಿಸಿದ್ದ ಎಂದು ತಿಳಿದುಬಂದಿದೆ. ಅಲ್ಲದೇ ಹತ್ಯೆಗೆ ಚಾಕು ಖರೀದಿಸಿದ್ದ ಮುಬಾರಕ್, ಕೃತ್ಯಕ್ಕೆ ಕಾರು, ನಾಲ್ವರನ್ನ ಕಳುಹಿಸಿದ್ದ ಎನ್ನುವ ಮಾಹಿತಿ ಲಭ್ಯವಾಗಿದೆ.

ಬಸವೇಶನನ್ನು ಕೊಲೆ



ಮಾಡುವ ಬಗ್ಗೆ ಮುಬಾರಕ್, ಗುತ್ತಿಗೆದಾರ ಸುನೀಲ್ ಎಂಬಾತನಿಗೆ ಹೇಳಿದ್ದ. ಇದನ್ನು ಸುನೀಲ್, ಮೊನ್ನೆ ಅಂದರೆ ಆಗಸ್ಟ್ 19 ರಂದು ಭದ್ರಾವತಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸದ್ಯ ಸುನೀಲ್ ನೀಡಿದ ದೂರು ಆಧರಿಸಿ ಭದ್ರಾವತಿ ಹಳೆನಗರ ಠಾಣೆಯ ಪೊಲೀಸರು ಎಫ್‌ಐಆರ್ ದಾಖಲು ಮಾಡಿಕೊಂಡಿದ್ದು, ತನಿಖೆ ಕೈಗೊಂಡಿದ್ದಾರೆ

ಡಿಚ್ಚಿ ಮುಬಾರಕ್ ನಿಂದ ಹತ್ಯೆ ಸುಫಾರಿ ಪಡೆದುಕೊಂಡಿದ್ದ ಟಿಪ್ಪು ಮತ್ತು ಇತರೆ ನಾಲ್ವರ ವಿರುದ್ಧ ಭದ್ರಾವತಿ ಹಳೆ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಟಿಪ್ಪುನನ್ನು ಪೊಲೀಸರು ಬಂಧಿಸಿ ವಿಚಾರಣೆಗೊಳಪಡಿಸಿದ್ದಾರೆ ಎಂದು ತಿಳಿದುಬಂದಿದೆ.

## 100 ಸಿದ್ದರಾಮಯ್ಯ ಅಲ್ಲ ಒಬ್ಬ ಜಮೀರ್‌ನ ಫೇಸ್ ಮಾಡಿ: ಎಚ್.ಡಿಕೆಗೆ ಜಮೀರ್ ಸವಾಲ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಿದ್ದರಾಮಯ್ಯ ಬೇಡ, ನೀವು ಮೊದಲು ಜಮೀರ್ ನನ್ನು ಫೇಸ್ ಮಾಡಿ ಎಂದು ಕುಮಾರಸ್ವಾಮಿ ವಿರುದ್ಧ ಸಚಿವ ಜಮೀರ್ ಅಹ್ಮದ್ ಖಾನ್ ಸವಾಲ್ ಹಾಕಿದ್ದಾರೆ.

ಸರ್ಕಾರದ ಕುತಂತ್ರದಿಂದ ಎಸ್‌ಐಟಿ ಲೋಕಾಯುಕ್ತ ರಾಜ್ಯಪಾಲರಿಗೆ ಪ್ರಾಸಿಕ್ಯೂಷನ್‌ಗೆ ಕೇಳಿದೆ ಎಂಬ ಕುಮಾರಸ್ವಾಮಿ ಆರೋಪಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕುಮಾರಸ್ವಾಮಿ ಮಾತನಾಡಿದರೆ ಧಮ್ಕಿ ಹಾಕೋದು, ಬ್ಲ್ಯಾಕ್ ಮೇಲ್ ಮಾಡೋದು. ಇದು ಎಷ್ಟು ದಿನ ನಡೆಯುತ್ತದೆ ಕುಮಾರಸ್ವಾಮಿ ಅವರೇ? ಸಿದ್ದರಾಮಯ್ಯ ಬೇಡ, ನೀವು ಮೊದಲು ಜಮೀರ್‌ನನ್ನು ಫೇಸ್ ಮಾಡಿ. ಬಾಯಿಗೆ ಬಂದಂತೆ ಮಾತನಾಡೋದಾ ಎಂದು ವಾಗ್ದಾಳಿ ನಡೆಸಿದರು.




ನಾನು ರಾಮನಗರದಲ್ಲಿ ನಿಮಗೆ ಏನು ಕೇಳಿದೆ? ಸಿಎಂ ಆಗಿದ್ದಾಗ ಕುಮಾರಸ್ವಾಮಿ ಎಷ್ಟು ಮನೆ ರಾಮನಗರ ಜನರಿಗೆ ಕೊಟ್ಟಿದ್ದೀರಾ ಎಂದು ಕೇಳಿದೆ. ಸಿಎಂ ಆದರೂ ನಿಮ್ಮ ಜಿಲ್ಲೆಗೆ ಮನೆ ಕೊಟ್ಟಿಲ್ಲ. ಇದನ್ನು ಕೇಳಿದ್ದು ನಾನು. ಇದಕ್ಕೆ ಅವನು ಯಾರು ಒಂದು ಬಸ್‌ಗೆ ಎರಡು ನಂಬರ್ ಹಾಕಿಕೊಂಡು ಓಡಿಸಿದ್ದವನು ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಒಂದು ನಂಬರ್ ಎರಡು ಬಸ್‌ಗೆ ಹಾಕಿಸಿ ಓಡಿಸೋನು ಆಗಿದ್ದರೆ 2017ರವರೆಗೆ ನನ್ನನ್ನು ಯಾಕೆ ನಿಮ್ಮ ಜೊತೆ ಇಟ್ಟುಕೊಂಡ್ರಿ ಎಂದು ಪ್ರಶ್ನೆ ಮಾಡಿದರು.

### ವಿಜೃಂಭಣೆಯಿಂದ ಜರುಗಿದ ಶ್ರೀ ಗುರು ರಾಘವೇಂದ್ರರ ಆರಾಧನೆ

# ರಾಯರು ಸಕಲರನ್ನೂ ಅನುಗ್ರಹಿಸಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಘವೇಂದ್ರ ಸ್ವಾಮಿಗಳ ಆರಾಧನೆಯ ನಿಮಿತ್ತ ಗುರುವಾರ ರಾಯರ ರಥೋತ್ಸವವು ಅಪಾರ ಭಕ್ತ ಸಮೂಹದ ನಡುವೆ ಶ್ರದ್ಧಾ, ಭಕ್ತಿ ಮತ್ತು ವಿಜೃಂಭಣೆಯಿಂದ ಪಟ್ಟಣದಲ್ಲಿ ಜರುಗಿತು. ಭಕ್ತರು ವೇದಘೋಷ, ವಾದ್ಯವೈಭವಗಳೊಂದಿಗೆ ಭಕ್ತಿ ಸಂಗೀತದ ನಾದಕ್ಕೆ ಹೆಜ್ಜೆ ಹಾಕುತ್ತಾ ಸಾಗಿದರು.

ದೇವಸ್ಥಾನದಲ್ಲಿ ಸುಪ್ರಭಾತ, ಅಷ್ಟೋತ್ತರ, ಹರಿವಾಯು ಸ್ತುತಿ, ಅಭಿಷೇಕ ಅಲಂಕಾರ ಪೂಜೆ, ಅನ್ನಸಂತರ್ಪಣೆ, ಸಂಜೆ ತಾರತಮ್ಯ ಭಜನೆ, ಉಪನ್ಯಾಸ, ಸ್ಥಳೀಯರಿಂದ ಸಂಗೀತ ಸೇವೆಗಳು ನಡೆದವು. ರಥೋತ್ಸವದ ನಂತರ ಶ್ರೀಮಠದ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಮಠದ ಧರ್ಮದರ್ಶಿ ಹನುಮಂತಾಚಾರ್ಯ ಹೊಂಬಳ ಅವರು, ನಂಬಿದ ಭಕ್ತರನ್ನು ರಾಯರು ಕೈಬಿಡುವುದಿಲ್ಲ. ನೂರಾರು ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಪಟ್ಟಣದ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಎಲ್ಲರ ಸಹಕಾರದಿಂದ ಆರಾಧನೆ ಸೇರಿ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯ. ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ರಾಯರ ಕಾರ್ಯಕ್ರಮವನ್ನು ಎಲ್ಲ ಸಮಾಜ



ಬಾಂಧವರು ಪಾಲ್ಗೊಂಡು ಯಶಸ್ವಿಗೊಳಿಸುವ ಸಂಪ್ರದಾಯ ನಮ್ಮ ಭಾಗದಲ್ಲಿ ಉತ್ತಮ ಪರಂಪರೆಯಾಗಿದೆ. ಆರಾಧನೆ ಕಾರ್ಯಕ್ರಮ ಯಶಸ್ವಿಯಾಗಿರುವದಕ್ಕೆ ಎಲ್ಲರಿಗೂ ರಾಯರು ಆಶೀರ್ವದಿಸಲಿ ಎಂದರು.

ಈ ಸಂದರ್ಭದಲ್ಲಿ ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನಿಸ್, ವ್ಹಿ.ಎಲ್. ಪೂಜಾರ, ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಚಂಬಣ್ಣ ಬಾಳಿಕಾಯಿ, ಶರಣು ಗೋಡಿ, ಶಂಕರ ಬೆಟಗೇರಿ, ಕೆ.ಎಸ್. ಕುಲಕರ್ಣಿ, ಎ.ಪಿ. ಕುಲಕರ್ಣಿ, ವೆಂಕಟೇಶ ಗುಡಿ, ಗುರುರಾಜ ಪಾಟೀಲಕುಲಕರ್ಣಿ, ವೇದವ್ಯಾಸ ಹೊಂಬಳ, ಅರವಿಂದ ದೇಶಪಾಂಡೆ, ಮನೋಜ ಹೊಂಬಳ, ಅನಿಲ ಕುಲಕರ್ಣಿ, ಮಹೇಶ ಹೊಗೆಸೊಪ್ಪಿನ್, ಶರಣು ಗೋಡಿ, ಬಾಬು ಅಳವಂಡಿ, ಗಂಗಾಧರ ಗೋಡಿ, ಶ್ರೀಪಾದರಾಜ ಹೊಂಬಳ, ಗುರುರಾಜ ಸುಳ್ಳದ, ಕೃಷ್ಣ ಕುಲಕರ್ಣಿ (ತಂಗೋಡ), ರಾಘವೇಂದ್ರ ಗೊಗ್ಗಿ, ಕೃಷ್ಣಕುಮಾರ ಕುಲಕರ್ಣಿ,



ಬಿ.ಕೆ. ಕುಲಕರ್ಣಿ, ಶ್ರೀನಿವಾಸ ಹುಲಮನಿ, ಶ್ರೀಕಾಂತ ಪೂಜಾರ, ಡಾ. ಪ್ರಸನ್ನ ಕುಲಕರ್ಣಿ, ಡಿ.ಎಂ. ಪೂಜಾರ ಮಂಜುನಾಥ ಒಂಟಿ, ಪ್ರಾಣೇಶ ಬೆಳ್ಳಟ್ಟಿ, ರಮೇಶ ತೊರಗಲ್, ಧೃವ ಬೆಟಗೇರಿ, ರವೀಂದ್ರ ರಾಯಚೂರ, ಗಂಗಾಧರ ಹಳ್ಳಿಕೇರಿ, ಸೇರಿದಂತೆ ನೂರಾರು ಮಹಿಳೆಯರು ಸಹ ಈ ರಥೋತ್ಸವದಲ್ಲಿ ಪಾಲ್ಗೊಂಡಿದ್ದರು.

ಮಂಗಳವಾರ ಬೆಳಿಗ್ಗೆಯಿಂದಲೇ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಆರಾಧನೆ ಕಾರ್ಯಕ್ರಮ ನೆರವೇರಿತು. ಗುರುವಾರ ವಿವಿಧ ಪುಷ್ಪಗಳಿಂದ ಅಲಂಕರಿಸಿದ ರಾಯರ ವೃಂದಾವನವನ್ನು ಭಕ್ತರು ವೀಕ್ಷಿಸಿ ಕಣ್ತುಂಬಿಕೊಂಡರು.

## ಪುರಸಭೆ ಚುನಾವಣೆ ಮುಂದಕ್ಕೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಎಸ್‌ಸಿ, ಎಸ್ಟಿ, ಇತರೆ ಜನಾಂಗದವರಿಗೆ ಅಧ್ಯಕ್ಷ ಸ್ಥಾನದ ಮೀಸಲಾತಿ ಬದಲಿಸುವಂತೆ ಕೋರ್ಟ್ ಮೊರೆ ಹೋದ ಕಾರಣ ಬುಧವಾರ ನಡೆಯಬೇಕಿದ್ದ ಪುರಸಭೆ ಚುನಾವಣೆ ತಾತ್ಕಾಲಿಕವಾಗಿ ಮುಂದೂಡಲ್ಪಟ್ಟಿತು.

ರಾಜ್ಯ ಸರ್ಕಾರವು ಆಗಸ್ಟ್ 21ರಂದು ಪುರಸಭೆ ಅಧ್ಯಕ್ಷ-ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಿಗದಿಪಡಿಸಿತ್ತು. ಆದರೆ ಚುನಾವಣೆಗೂ ಪೂರ್ವದಲ್ಲಿ ನ್ಯಾಯಾಲಯಕ್ಕೆ ನೀಡಿದ ರಿಟ್ ಅರ್ಜಿಯನ್ನು ಆನ್‌ಲೈನ್ ಮೂಲಕ ಸದಸ್ಯರು ಪಡೆದು ತಹಸೀಲ್ದಾರರಿಗೆ ಸಲ್ಲಿಸಿದ ಹಿನ್ನಲೆಯಲ್ಲಿ ತಹಸೀಲ್ದಾರರು ಅರ್ಜಿಯನ್ನು ಪರಿಶೀಲಿಸಿ ಚುನಾವಣೆಯನ್ನು ರದ್ದುಪಡಿಸಿದರು.

ಕಳೆದ 29 ವರ್ಷಗಳಿಂದ ಹರಪನಹಳ್ಳಿ ಪುರಸಭೆಯ ಅಧ್ಯಕ್ಷ ಸ್ಥಾನವು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಇತರೆ ಜಾತಿಯವರಿಗೆ ಮೀಸಲು ನೀಡಿಲ್ಲದ ಕಾರಣ, ಪುರಸಭೆ ಅಧ್ಯಕ್ಷ ಕಾಯ್ದೆ 13(ಎ) ಅನ್ವಯ ಉಲ್ಲಂಘನೆಯಾಗಿದ್ದು ಮೀಸಲಾತಿಯನ್ನು ಪರಿಶೀಲಿಸುವಂತೆ ಧಾರವಾಡ ಉಚ್ಚ ನ್ಯಾಯಾಲಯಕ್ಕೆ ಟಿ. ವೆಂಕಟೇಶ್ ಎಂಬುವರು ರಿಟ್ ಅರ್ಜಿ ಸಲ್ಲಿಸಿದ್ದರು.

ಆಗಸ್ಟ್ 29ರವರೆಗೆ ತಾತ್ಕಾಲಿಕವಾಗಿ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯನ್ನು ಮುಂದೂಡಲಾಗಿದ್ದು, ಕೋರ್ಟ್ ಆದೇಶದ ನಂತರ ಚುನಾವಣೆ ನಡೆಸಲಾಗುವುದು ಎಂದು ತಹಸೀಲ್ದಾರ್ ಬಿ.ವಿ. ಗಿರೀಶ್ ತಿಳಿಸಿದ್ದಾರೆ.

## ರಸ್ತೆ ದುರಸ್ತಿಗೆ ಅಗ್ರಹ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಇಲ್ಲಿನ ಯಲ್ಲಾಪುರ ಗ್ರಾಮದಿಂದ ಸಿದ್ದಾಪುರ ಹಾಗೂ ಯಲ್ಲಾಪುರದಿಂದ ಸವಣೂರ ತಾಲೂಕಿನ ಇಚ್ಚಂಗಿ ಗ್ರಾಮದವರೆಗಿನ ಸಂಪರ್ಕ ಕಲ್ಪಿಸುವ ರಸ್ತೆಯು ಸಂಪೂರ್ಣ ಹದಗೆಟ್ಟಿದ್ದು, ಇದರಿಂದ ಶಾಲಾ ವಿದ್ಯಾರ್ಥಿಗಳಿಗೆ, ಗ್ರಾಮಸ್ಥರಿಗೆ ಓಡಾಡಲು ತೊಂದರೆಯಾಗಿ ದಿನನಿತ್ಯ ಜೀವ ಭಯದಲ್ಲಿ ಅಡ್ಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ರಸ್ತೆ ದುರಸ್ತಿಗೊಳಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಇಲ್ಲಿನ ರೈತರು ಇದೇ ರಸ್ತೆಯಲ್ಲಿಯೇ ತಮ್ಮ ಹೊಲಗಳಿಗೆ ಸಂಚರಿಸಬೇಕಿದೆ. ಬೆಳೆದ ಬೆಳೆಗಳನ್ನು ಮಾರಾಟ ಮಾಡಲು ಮಾರುಕಟ್ಟೆಗೆ ಇದೇ ರಸ್ತೆಯಿಂದ ಹೋಗಬೇಕಾಗಿದ್ದು, ಸಂಪೂರ್ಣ ಹದಗೆಟ್ಟಿರುವ ರಸ್ತೆಯಿಂದ ಸಾರ್ವಜನಿಕರಿಗೆ, ರೈತರಿಗೆ, ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗುತ್ತಿದ್ದರೂ ಸಹ ಯಾವುದೇ ಕ್ರಮಗಳಾಗುತ್ತಿಲ್ಲ ಎಂದು ಆರೋಪಿಸಿದ್ದಾರೆ. ಸವಣೂರ ತಾಲೂಕಿನ ಯಾವುದೇ ಬಸ್ಸುಗಳು ಈ ರಸ್ತೆಯಲ್ಲಿ ಸಂಚರಿಸಲು ನಿರಾಕರಿಸುತ್ತಿದ್ದಾರೆ. ಸವಣೂರಿನ ರೇಲ್ವೆ ಸ್ಟೇಷನ್‌ಗೆ ಹೋಗಲು ಸಹ ಅನಾನುಕೂಲವಾಗುತ್ತಿದೆ. ಈ ವಿಷಯವನ್ನು ಹಲವಾರು ಬಾರಿ ಸಂಬಂಧಪಟ್ಟ ಜನಪ್ರತಿನಿಧಿಗಳಿಗೆ ಹಾಗೂ ಅಧಿಕಾರಿಗಳ ಗಮನಕ್ಕೆ ತಂದರೆ ಹಾರಿಕೆಯ ಉತ್ತರ ನೀಡುತ್ತಿದ್ದಾರೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಜುಂಜನಗೌಡ ನರಸಮ್ಮನವರ, ದೇವೀಂದ್ರಪ್ಪ ಮತ್ತೂರ, ಶಿವನಗೌಡ ಭರಮಗೌಡರ್, ದೇವೀಂದ್ರಪ್ಪ ಪ್ಯಾಟಿ, ಶೇಖಪ್ಪ ಅಂಗಡಿ, ಶಿವಪ್ಪ ಲಮಾಣಿ, ಬಸನಗೌಡ ಹರಕುಣಿ, ಬಸವಣ್ಣೆಪ್ಪ ಪ್ಯಾಟಿ ಮುಂತಾದವರಿದ್ದರು.

### ಜೀವವನ್ನು ಕೈಯಲ್ಲಿ ಹಿಡಿದು ಸಂಚರಿಸುತ್ತಿರುವ ವಾಹನ ಸವಾರರು

## ತಿಮ್ಮಾಪೂರ ರಸ್ತೆ ದುರಸ್ತಿ ಯಾವಾಗ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ತಿಮ್ಮಾಪೂರ ಹಾಗೂ ಹರ್ಲಾಪೂರ ಗ್ರಾಮದಿಂದ ಗದಗ ನಗರಕ್ಕೆ ಸಂಪರ್ಕ ಕಲ್ಪಿಸುವ ಜಿಲ್ಲಾ ಮುಖ್ಯ ರಸ್ತೆಯು ರಾಷ್ಟ್ರೀಯ ಹೆದ್ದಾರಿಯ 8 ಕಿ.ಮೀ ಹಾಗೂ ತಿಮ್ಮಾಪೂರ ಗ್ರಾಮದಿಂದ ಯೆರೆಹಂಚಿನಾಳ ಗ್ರಾಮದ ಕಾಣೆಹಳ್ಳದವರಗೆ 2 ಕಿ.ಮೀ ಹೀಗೆ ಒಟ್ಟೂ 10 ಕಿ.ಮೀ ರಸ್ತೆ ಸಂಪೂರ್ಣ ಹಾಳಾಗಿದೆ. ರಸ್ತೆಯ ತುಂಬ ಹೊಂಡಗಳೇ ತುಂಬಿದ್ದು, ವಾಹನ ಸವಾರರು ನಿತ್ಯವೂ ಪರದಾಡುವಂತಾಗಿದೆ.

ಇದೇ ರಸ್ತೆಯ ಮೂಲಕ ನಿತ್ಯ ಗದಗ, ಕುಕನೂರು ನಗರಗಳಿಗೆ ನೂರಾರು ವಾಹನಗಳು ಸಂಚರಿಸುತ್ತವೆ. ರೈತರು ಬೆಳೆದ ಬೆಳೆಯನ್ನು ಮಾರಾಟ ಮಾಡಲು ಗದಗ ಎಪಿಎಂಸಿಗೆ ಇದೇ ರಸ್ತೆಯ ಮೂಲಕ ನಿತ್ಯ ಸಂಚರಿಸುತ್ತಾರೆ. ವಾಹನ ಸವಾರರಿಗೆ ಸಮಸ್ಯೆಗಳಾಗುತ್ತಿದ್ದರೂ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಗಮನಹರಿಸುತ್ತಿಲ್ಲ.

ವರ್ಷಕ್ಕೊಮ್ಮೆ ಪಿಡಬ್ಲ್ಯೂಡಿ ಇಲಾಖೆಯು ಈ ರಸ್ತೆಗೆ ಲಕ್ಷಾಂತರ ರೂಪಾಯಿ ವೆಚ್ಚ ಮಾಡಿ ತೇಪೆ ಹಚ್ಚುವ ಕಾರ್ಯ ಮಾಡುತ್ತಿದೆ. ಈ ರಸ್ತೆಯಲ್ಲಿ ಅನೇಕ ಅಪಘಾತಗಳ ಸಂಭವಿಸಿದ್ದು, ಹಲವಾರು ಸಾವು ಕೂಡ ಸಂಭವಿಸಿದೆ.

ಈ ರಸ್ತೆ ನಿರ್ಮಾಣ ಮಾಡುವ ಕುರಿತು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಿ.ಆರ್. ನಾರಾಯಣರೆಡ್ಡಿ ಬಣದ ಗದಗ ಜಿಲ್ಲಾ ರೈತ ಸಂಘದ ಮೂಲಕ ಹಾಗೂ ಗ್ರಾಮ ಪಂಚಾಯಿತಿಯಿಂದ ಹಲವು ಬಾರಿ ಪಿಡಬ್ಲ್ಯೂಡಿ ಇಲಾಖೆಯ ಅಧಿಕಾರಿಗಳಿಗೆ ಮನವಿ ಮಾಡಿದರೂ ಪ್ರಯೋಜನವಿಲ್ಲ ಎಂದು ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ತಿಳಿಸಿದ್ದಾರೆ.

ಇನ್ನಾದರೂ ಈ ರಸ್ತೆ ದುರಸ್ತಿಗೆ ಕ್ರಮ ಕೈಗೊಳ್ಳದಿದ್ದರೆ ಲೋಕೋಪಯೋಗಿ ಕಚೇರಿಯೆದುರು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ, ಶರಣಪ್ಪ ಜೋಗಿನ, ಶೇಖಪ್ಪ ಘಂಟಿ, ರಾಮಣ್ಣ ಖಂಡ್ರೆ, ಬಾಳಪ ಗಂಗರಾತ್ರಿ, ಅಂದಪ್ಪ ಕೊಳೂರು ಮುಂತಾದ ರೈತ ಮುಖಂಡರು ಒತ್ತಾಯಿಸಿದ್ದಾರೆ.

## ದೇವರಾಜ ಅರಸು ಶೋಷಿತರ ನೇತಾರ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ಕಲ್ಪಿಸಿದ ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸು ಜಾರಿಗೆ ತಂದ ಯೋಜನೆಗಳು ಇಂದಿಗೂ ಪ್ರಸ್ತುತ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ದೇವರಾಜ್ ಅರಸು ಭವನದಲ್ಲಿ ತಾಲೂಕು ಆಡಳಿತ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಭಾಗಿತ್ವದಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ್ ಅರಸು ಅವರ 109ನೇ ಜನ್ಮದಿನಾಚರಣೆ ಹಾಗೂ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭೂ ಸುಧಾರಣಾ ಕಾಯ್ದೆಯನ್ನು ಪರಿಣಾಮ ಕಾರಿಯಾಗಿ ಜಾರಿಗೆ ತಂದ ದೇಶದ ಮೊದಲ ಮುಖ್ಯಮಂತ್ರಿ ಡಿ. ದೇವರಾಜ ಅರಸು. ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಗೆ ಅವರು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದರು. ತಮ್ಮ ಅಧಿಕಾರಾವಧಿಯಲ್ಲಿ ಶೋಷಿತರಿಗೆ ವಿಧಾನಸೌಧ ಪ್ರವೇಶಕ್ಕೆ ಮುಕ್ತ ಅವಕಾಶ ನೀಡಿದ್ದರು ಎಂದು ಸ್ಮರಿಸಿದರು.

ಪ್ರಗತಿಪರ ಚಿಂತಕ ಸಾಹಿತಿ ಇಸ್ಮಾಯಿಲ್ ಎಲಿಗಾರ ದೇವರಾಜ್ ಅರಸು ಅವರ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಎಸ್.ಆರ್. ಗಂಗಪ್ಪ ಬ್ರಹ್ಮಶ್ರೀ



ನಾರಾಯಣರ ಕುರಿತು ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಮಾತನಾಡಿದರು,

ತಹಸೀಲ್ದಾರ ಬಿ.ವಿ. ಗಿರೀಶ ಬಾಬು, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವಿಜಯಲಕ್ಷ್ಮೀ ಹತ್ತಿಕಾಳ, ವಿಸ್ತರಣಾಧಿಕಾರಿ ಭೀಮಪ್ಪ, ನಿಲಯ ಪಾಲಕರಾದ ಬಿ.ಹೆಚ್. ಚಂದ್ರಪ್ಪ, ಜುಂಜಪ್ಪ, ವೀರೇಶ, ಸುನಿಲ, ಪ್ರೇಮಾವತಿ, ಶ್ರುತಿ, ಅನ್ನಪೂರ್ಣ, ಶಿಕ್ಷಕ ಮೇಘರಾಜ, ಹೇಮಣ್ಣ ಮೋರಗೇರಿ, ನರೇಗಾ ಸಹಾಯಕ ನಿರ್ದೇಶಕ ಸೋಮಶೇಖರ, ತೋಟಗಾರಿಕೆ ಇಲಾಖೆಯ ರವೀಂದ್ರ ಸಿದ್ದೇಶ, ಅಶೋಕ ಮುಂತಾದವರಿದ್ದರು.

ದೇವರಾಜ ಅರಸು ಶೋಷಿತರ ನೇತಾರ

ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ಕಲ್ಪಿಸಿದ ಮಾಜಿ ಮುಖ್ಯಮಂತ್ರಿ ದೇವರಾಜ್ ಅರಸು ಜಾರಿಗೆ ತಂದ ಯೋಜನೆಗಳು ಇಂದಿಗೂ ಪ್ರಸ್ತುತ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ದೇವರಾಜ್ ಅರಸು ಭವನದಲ್ಲಿ ತಾಲೂಕು ಆಡಳಿತ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಹಭಾಗಿತ್ವದಲ್ಲಿ ನಡೆದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ್ ಅರಸು ಅವರ 109ನೇ ಜನ್ಮದಿನಾಚರಣೆ ಹಾಗೂ ಬ್ರಹ್ಮಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭೂ ಸುಧಾರಣಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದ ದೇಶದ ಮೊದಲ ಮುಖ್ಯಮಂತ್ರಿ ಡಿ. ದೇವರಾಜ ಅರಸು. ಹಿಂದುಳಿದ ವರ್ಗಗಳ ಶ್ರೇಯೋಭಿವೃದ್ಧಿಗೆ ಅವರು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದರು. ತಮ್ಮ ಅಧಿಕಾರಾವಧಿಯಲ್ಲಿ ಶೋಷಿತರಿಗೆ ವಿಧಾನಸೌಧ ಪ್ರವೇಶಕ್ಕೆ ಮುಕ್ತ ಅವಕಾಶ ನೀಡಿದ್ದರು ಎಂದು ಸ್ಮರಿಸಿದರು.

ಪ್ರಗತಿಪರ ಚಿಂತಕ ಸಾಹಿತಿ ಇಸ್ಮಾಯಿಲ್ ಎಲಿಗಾರ ದೇವರಾಜ್ ಅರಸು ಅವರ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಎಸ್.ಆರ್. ಗಂಗಪ್ಪ ಬ್ರಹ್ಮಶ್ರೀ ನಾರಾಯಣರ ಕುರಿತು ವಿಶೇಷ ಉಪನ್ಯಾಸ ನೀಡಿದರು. ತಾಲೂಕು ಉಪವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ ಮಾತನಾಡಿದರು,

ತಹಸೀಲ್ದಾರ ಬಿ.ವಿ. ಗಿರೀಶ ಬಾಬು, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವಿಜಯಲಕ್ಷ್ಮೀ ಹತ್ತಿಕಾಳ, ವಿಸ್ತರಣಾಧಿಕಾರಿ ಭೀಮಪ್ಪ, ನಿಲಯ ಪಾಲಕರಾದ ಬಿ.ಹೆಚ್. ಚಂದ್ರಪ್ಪ, ಜುಂಜಪ್ಪ, ವೀರೇಶ, ಸುನಿಲ, ಪ್ರೇಮಾವತಿ, ಶ್ರುತಿ, ಅನ್ನಪೂರ್ಣ, ಶಿಕ್ಷಕ ಮೇಘರಾಜ, ಹೇಮಣ್ಣ ಮೋರಗೇರಿ, ನರೇಗಾ ಸಹಾಯಕ ನಿರ್ದೇಶಕ ಸೋಮಶೇಖರ, ತೋಟಗಾರಿಕೆ ಇಲಾಖೆಯ ರವೀಂದ್ರ ಸಿದ್ದೇಶ, ಅಶೋಕ ಮುಂತಾದವರಿದ್ದರು.

## ಭೋಗೇಶ್ವರ ಸ್ವಾಮೀಜಿ ಕುಂಭಾಭಿಷೇಕ ಮಹೋತ್ಸವ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ದೇವರು, ದೇವಸ್ಥಾನಗಳಿಂದ ಮಾನಸಿಕ ನೆಮ್ಮದಿ ಪ್ರಾಪ್ತಿಯಾಗುತ್ತದೆ ಎಂದು ರಾ ಉಚ್ಚಂಗಿದುರ್ಗ ಕಟ್ಟೆಮನೆ ರಾಜಗುರು ರೇವಣಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.


ಇಲ್ಲಿನ ಜಂಗಮ ತುಂಬಿಗೆರೆ ಗ್ರಾಮದ ಭೋಗೇಶ್ವರ ಸ್ವಾಮೀಜಿ ಕುಂಭಾಭಿಷೇಕ ಮಹೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಇಂದಿನ ಕಂಪ್ಯೂಟರ್ ಯುಗದಲ್ಲಿ ಮಾನಸಿಕ ಒತ್ತಡದಲ್ಲಿ ಬದುಕುತ್ತಿದ್ದೇವೆ. ಪೂಜೆ, ಪುನಸ್ಕಾರಗಳಿಂದ ಒತ್ತಡ ನಿವಾರಣೆಯಾಗಿ ಬದುಕಿಗೆ ಶಾಂತಿ ಪ್ರಾಪ್ತಿಯಾಗುತ್ತದೆ ಎಂದರು.

ಭೊಗೇಶ್ವರ ಸ್ವಾಮಿ ಆರಾಧನೆ ಅಂಗವಾಗಿ 108 ಪೂರ್ಣಕುಂಭ ಮೇಳ ನಡೆಯಿತು. ಗ್ರಾಮದ ಹೊರ ವಲಯದಲ್ಲಿರುವ ಹಾಲಸ್ವಾಮಿ ಮಠದಿಂದ ಆರಂಭವಾದ ಕುಂಭ ಮೇಳ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ವಿವಿಧ ವಾದ್ಯವೃಂದಗಳು ಮೆರವಣಿಗೆಯ ಮೆರಗು ಹೆಚ್ಚಿಸಿದವು.ಈ ಸಂದರ್ಭದಲ್ಲಿ ಹಡಗಲಿ ಹಾಲಸ್ವಾಮಿ, ತುಂಬಿಗೆರೆ ಶಿವಣ್ಣ, ರವೀಂದ್ರಪ್ಪ, ಗೀತಾ, ಮೇಘರಾಜ, ನಂಜಪ್ಪ, ಪರಶುರಾಮ, ಶಿವಕುಮಾರ್ ಸ್ವಾಮಿ, ಭೋಗೇಶ್ವರಯ್ಯ, ರವಿಕುಮಾರ್, ಸಿದ್ದಯ್ಯ, ರಾಮದೇವಯ್ಯ, ವಸಂತಕುಮಾರ್ ಮುಂತಾದವದ್ದರು.

## ಕಳ್ಳರ ಕೈಚಳಕ: ಮೂರು ಮನೆಗಳ ಬೀಗ ಮುರಿದು ಕಳ್ಳತನ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ



ಮೂರು ಮನೆಗಳ ಬೀಗ ಮುರಿದು ಕಳ್ಳತನ ಮಾಡಿರುವ ಘಟನೆ ಹರಪನಹಳ್ಳಿ ತಾಲೂಕಿನ KHB ಬಡಾವಣೆಯಲ್ಲಿ ನಡೆದಿದೆ.

ಉಪನ್ಯಾಸಕ ಬುಳ್ಳಪ್ಪ, ವೀರೇಶ ನಾಯಕ, ಯೋಧ ಅಡಿವೆಪ್ಪ ಸೇರಿ ಮೂವರ ಮನೆಯಲ್ಲಿ ಕಳ್ಳತನ ಮಾಡಿದ್ದು, ಕಳ್ಳರ ಕೈಚಳಕಕ್ಕೆ ಸ್ಥಳೀಯರು ಆತಂಕ ಗೊಂಡಿದ್ದಾರೆ.

ಉಪನ್ಯಾಸಕ ಬುಳ್ಳಪ್ಪ ಮನೆಯಲ್ಲಿ ಒಟ್ಟು 14 ಲಕ್ಷ ಮೌಲ್ಯದ 20 ತೊಲೆ ಬಂಗಾರ, 15 ತೊಲೆ ಬೆಳ್ಳಿ ಆಭರಣಗಳು ಹಾಗೂ 8 ಸಾವಿರ ನಗದನ್ನು ಕಳ್ಳರು ಕದ್ದೊಯ್ದಿದ್ದಾರೆ.

ಉಪನ್ಯಾಸ ವೀರೇಶ್ ನಾಯಕ ಬೇರೆ ಊರಿಗೆ ತೆರಳಿದ್ರಿಂದ ಏನೆಲ್ಲ ಕಳ್ಳತನ ಆಗಿದೆ ಅನ್ನೋದು ಕಂಡುಬಂದಿಲ್ಲ, ಯೋಧ ಅಡಿವೆಪ್ಪ ಮನೆಯಲ್ಲಿ ಏನೂ ಸಿಗದೇ ಇರುವುದರಿಂದ ಕಳ್ಳರು ಬೀರುವಿನ ಡ್ರಾ ಕಿತ್ತು ಬಿಸಾಕಿ ಹೋಗಿದ್ದಾರೆ. ಘಟನಾ ಸ್ಥಳಕ್ಕೆ ಹೊಸಪೇಟೆ ಬೆರಳಚ್ಚು ತಜ್ಞರು, ಶ್ವಾನದಳ ತಂಡ ಆಗಮಿಸಿ ಪರಿಶೀಲನೆ ನಡೆಸಿದರು.

ಡಿವೈಎಸ್ಪಿ ವೆಂಕಟಪ್ಪ ನಾಯಕ ಮತ್ತವರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಘಟನೆ ಸಂಬಂಧ ಹರಪನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


## ಕೆ.ಎಚ್. ಪಾಟೀಲ ಫುಟ್‌ಬಾಲ್ ಲೀಗ್ ಸೀಸನ್-2

■ವಿಜಯಸಾಕ್ಷಿ ಸುದ್ದಿ, ಗದಗ

ಸಚಿವ ಎಚ್.ಕೆ. ಪಾಟೀಲ ಆಯೋಜನೆಯ ಫುಟ್‌ಬಾಲ್ ಪಂದ್ಯಾವಳಿಗಳ ನೇತೃತ್ವವನ್ನು ವಹಿಸಿಕೊಂಡಿರುವ ಕೃಷ್ಣಗೌಡ ಪಾಟೀಲ ಹಾಗೂ ಸಚಿನ್ ಪಾಟೀಲರ ಉಪಸ್ಥಿತಿಯಲ್ಲಿ ಗದಗ-ಬೆಟಗೇರಿ ಅವಳಿ ನಗರದ ಫುಟ್‌ಬಾಲ್ ಆಟಗಾರರನ್ನು ಪ್ರೋತ್ಸಾಹಿಸುತ್ತಿದ್ದು, ಕ್ರೀಡಾ ಪ್ರೇಮಿಗಳ ಮೆಚ್ಚುಗೆಗೆ ಪಾತ್ರವಾಗಿದೆ.

ಮೊದಲನೇಯ ಪಂದ್ಯ ಕಿಕ್ಕರ್ಸ್-ಹಸಲರ್ಸ್ ನಡುವೆ ನಡೆದು, ಕಿಕ್ಕರ್ಸ್ ತಂಡ 2-1 ಗೋಲುಗಳಿಂದ ಗೆಲವು ಸಾಧಿಸಿತು. ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಕಿಕ್ಕರ್ಸ್ ತಂಡದ ಸುದರ್ಶನ ಲೋಕುರ ಪಡೆದುಕೊಂಡರು.

ಎರಡನೇ ಪಂದ್ಯ ಡಿಫೆಂಡರ್ಸ್-ಟರ್ಮಿನೇಟರ್ಸ್ ನಡುವೆ ನಡೆದು 1-1 ಗೋಲುಗಳಿಂದ ಪಂದ್ಯಾ ಡ್ರಾ ಆಯಿತು. ಟರ್ಮಿನೇಟರ್ಸ್ ತಂಡದ ಇಮಾಮ ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಪಡೆದುಕೊಂಡರು.



ಮೂರನೇ ಪಂದ್ಯ ಸ್ಕೈಲೈನ್-ರೇಬಲ್ ನಡುವೆ ನಡೆದು, 2-5 ಗೋಲುಗಳಿಂದ ರೇಬಲ್ ತಂಡ ಗೆಲವು ಸಾಧಿಸಿತು. ರೇಬಲ್ ತಂಡದ ರಾಘು ಹೊಸಮನಿ 3 ಗೋಲುಗಳನ್ನು ಹೊಡೆದು ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಪಡೆದುಕೊಂಡರು.

ನಾಲ್ಕನೇ ಪಂದ್ಯ ಸ್ಲೈಕರ್ಸ್ ಹಾಗೂ ಕಾಂಕರ್ಸ್ ನಡುವೆ ನಡೆದು ಸ್ಲೈಕರ್ಸ್ ತಂಡ 02-01 ಗೋಲುಗಳಿಂದ ಜಯಶಾಲಿಯಾಯಿತು. ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಸ್ಲೈಕರ್ಸ್ ತಂಡದ ಸಮೀರ ಪಡೆದುಕೊಂಡರು.

ಐದನೇ ಪಂದ್ಯ ವಾರಿಯರ್ಸ್-ಮಾಸ್ಟರ್ಸ್ ನಡುವೆ ಏರ್ಪಟ್ಟು, 1-1 ಗೋಲುಗಳಿಂದ ಪಂದ್ಯ ಡ್ರಾ ಆಯಿತು. ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ವಾರಿಯರ್ಸ್ ತಂಡದ ವಿನಾಯಕ ಪಡೆದುಕೊಂಡರು.

### ಪೌರಕಾರ್ಮಿಕರಿಗೆ ಆರೋಗ್ಯದ ಕುರಿತು ಅರಿವು, ಆರೋಗ್ಯ ತಪಾಸಣೆ ಕಾರ್ಯಕ್ರಮ

# ಮಾದಕ ವಸ್ತುಗಳ ಸೇವನೆಯಿಂದ ದೂರವಿರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಎಲ್ಲರ ಆರೋಗ್ಯ ಕಾಪಾಡುವ ಪೌರ ಕಾರ್ಮಿಕರು ತಂಬಾಕು ವ್ಯಸನ, ಮಾದಕ ವಸ್ತುಗಳ ಸೇವನೆಯನ್ನು ತ್ಯಜಿಸಿ ಒಳ್ಳೆಯ ಆಹಾರ ಸೇವಿಸಿ ಉತ್ತಮ ಜೀವನ ಶೈಲಿ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಹೇಳಿದರು.

ಗದಗ-ಬೆಟಗೇರಿ ನಗರಸಭೆ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ, ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮ, ಜಿಲ್ಲಾ ಎನ್.ಸಿ.ಡಿ. ವಿಭಾಗ, ಎನ್.ಟಿ.ಈ.ಪಿ. ಕಾರ್ಯಕ್ರಮ, ನಗರ ಸಭೆ ಗದಗ-ಬೆಟಗೇರಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಪೌರಕಾರ್ಮಿಕರಿಗೆ ಆರೋಗ್ಯದ ಅರಿವು ಮತ್ತು ಆರೋಗ್ಯ ತಪಾಸಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಅಸಾಂಕ್ರಾಮಿಕ ಕಾಯಿಲೆಗಳು ಹೆಚ್ಚುತ್ತಿದ್ದು, ಇದಕ್ಕೆ ಮುಖ್ಯ ಕಾರಣ ತಂಬಾಕು ವ್ಯಸನ, ಮಾದಕ ವಸ್ತುಗಳ ಸೇವನೆ, ಆಹಾರ ಪದ್ಧತಿ ಹಾಗೂ ಜೀವನ ಶೈಲಿ. ತಂಬಾಕು ಸೇವನೆಯಿಂದ ಕ್ಯಾನ್ಸರ್, ಹೃದಯ ಸಂಬಂಧಿ ಕಾಯಿಲೆಗಳು, ಪ್ಯಾರಲೈಸೀಸ್, ಡಯಾಬಿಟೀಸ್, ಟಿ.ಬಿ. ಎಂಬ ಮಾರಕ ಕಾಯಿಲೆಗಳಿಗೆ ಬಲಿಯಾಗುತ್ತಿದ್ದಾರೆ. ಎಲ್ಲರ ಆರೋಗ್ಯ ಕಾಪಾಡುವ ಪೌರ ಕಾರ್ಮಿಕರು ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದು ತಮ್ಮ ಆರೋಗ್ಯದ ಬಗ್ಗೆ ಗಮನ ಹರಿಸಬೇಕು ಎಂದು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಹೇಳಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರಾದ ಗೋಪಾಲ ಸುರಪುರ ಮಾತನಾಡಿ, ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮವನ್ನು ತಿಳಿಸಿ, ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ-2003ರ ಕುರಿತು ಮಾಹಿತಿ ನೀಡಿದರು.



ಆಪ್ತ ಸಮಾಲೋಚಕರಾದ ರೇಷ್ಮಾ ಬೇಗಂ ನದಾಫ್ ತಂಬಾಕು ವ್ಯಸನದಿಂದ ಮುಕ್ತವಾಗಲು ಮಲ್ಲಸಮುದ್ರದ ಗದಗ ಜಿಲ್ಲಾ ಆಸ್ಪತ್ರೆಯ ರೂಮ್ ನಂ 182ರಲ್ಲಿ ಲಭ್ಯವಿರುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಗಣೇಶ ಬಿ ಕ್ಷಯ ರೋಗದ ಕುರಿತು ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಎಲ್ಲಾ ಪೌರ ಕಾರ್ಮಿಕ ಸಿಬ್ಬಂದಿಗಳಿಗೆ ಬಾಯಿ ಕ್ಯಾನ್ಸರ್, ಹೈಪರ್ ಟೆನ್ಷನ್, ಸಕ್ಕರೆ ಕಾಯಿಲೆ ತಪಾಸಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡಾ. ರವಿ ಕಡಗಾವಿ, ಡಾ. ಮಹೇಶ, ನಗರಸಭೆ ಹಿರಿಯ ಆರೋಗ್ಯ ನಿರೀಕ್ಷಕ ಎಂ.ಎಂ. ಮಕಾಂದಾರ, ಹಿ.ಆ. ನಿರೀಕ್ಷಣಾಧಿಕಾರಿ ವೈ.ಎನ್. ಕಡೆಮನಿ, ಡಾ. ಸೌಮ್ಯ, ಡಾ. ಬಸವರಾಜ ಶೆಟ್ಟರ್, ಡಾ. ಮಂಜುನಾಥ, ಪ್ರವೀಣ, ಸಾಮಾಜಿಕ ಕಾರ್ಯಕರ್ತೆ ಬಸಮ್ಮ ಚಿತ್ತರಗಿ, ಶಿವಕುಮಾರ ಬಗಾಡೆ, ಪೈಯಾಜ್ ಮಕಾಂದಾರ ಉಪಸ್ಥಿತರಿದ್ದರು.

ಗದಗ-ಬೆಟಗೇರಿ ನಗರಸಭೆಯ ಪರಿಸರ ಅಭಿಯಂತರ ಆನಂದ ಬದಿ ಮಾತನಾಡಿ, ಪೌರ ಕಾರ್ಮಿಕ ಸಿಬ್ಬಂದಿಗಳಿಗೆ ಈ ರೀತಿಯ ಆರೋಗ್ಯದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಬಹಳ ಅವಶ್ಯಕ ಹಾಗೂ ಉಪಯುಕ್ತವಾಗಿದ್ದು, ಎಲ್ಲ ಪೌರ ಕಾರ್ಮಿಕ ಸಿಬ್ಬಂದಿಗಳು ಕಾರ್ಯಕ್ರಮವನ್ನು ಸದುಪಯೋಗ ಪಡೆದು ಕಾರ್ಯಕ್ರಮ ಯಶಸ್ವಿಗೊಳಿಸಲು ತಿಳಿಸಿದರು.

## ಮೋತಿ ಬಿಂದು ಶಸ್ತ್ರಚಿಕಿತ್ಸಾ ಶಿಬಿರ




■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ, ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆ ಹುಬ್ಬಳ್ಳಿ ಇವರ ಸಹಯೋಗ, ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರದಿಂದ ಗುರುವಾರ ಒಟ್ಟು 13 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ (ಮೋತಿ ಬಿಂದು) ಶಸ್ತ್ರ ಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ಮಾಡಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ಮಾಡಿದರು. ಕಣ್ಣಿನ ಪೊರೆಯ ಶಸ್ತ್ರ ಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ಖ್ಯಾತ ವೈದ್ಯರು ನಡೆಸಿದರು. ಇದಕ್ಕೂ ಮೊದಲು ಫಲಾನುಭವಿಗಳಿಗೆ ಉಚಿತವಾಗಿ ಬಿಪಿ, ಶುಗರ್, ರಕ್ತ ತಪಾಸಣೆ ಮಾಡಲಾಯಿತು. ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿಗಳು ಪಾಲ್ಗೊಂಡು ಸಹಾಯ-ಸಹಕಾರ ನೀಡಿದರು.

## ವೈದ್ಯೆ ಮೇಲೆ ಅತ್ಯಾಚಾರ ಕೇಸ್: ಸಿಬಿಐ ತನಿಖೆಯಲ್ಲಿ ಸ್ಫೋಟಕ ಮಾಹಿತಿ ಬಹಿರಂಗ..!

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜ್ ಮತ್ತು ಆಸ್ಪತ್ರೆಯಲ್ಲಿ 31 ವರ್ಷದ ಮಹಿಳಾ ಟ್ರೈನಿ ವೈದ್ಯೆಯ ಅತ್ಯಾಚಾರ ಮತ್ತು ಹತ್ಯೆಗೆ ಸಂಬಂಧಿಸಿದಂತೆ ಸ್ಫೋಟಕ ಮಾಹಿತಿ ಲಭ್ಯವಾಗುತ್ತಿದೆ.

ಟ್ರೈನಿ ವೈದ್ಯೆಯ ಮೇಲೆ ನಡೆದ ಅತ್ಯಾಚಾರ ಸಾಮೂಹಿಕ ಅತ್ಯಚಾರವಲ್ಲ. ಇದು ಓರ್ವ ವ್ಯಕ್ತಿಯಿಂದ ನಡೆದಿದೆ ಎಂದು ಸಿಬಿಐ ಮೂಲಗಳು ಹೇಳಿವೆ.

5 ದಿನಗಳ ಪ್ರಾಥಮಿಕ ತನಿಖೆಯಲ್ಲಿ ಈ ಮಾಹಿತಿ ಲಭ್ಯವಾಗಿದ್ದು ಆಸ್ಪತ್ರೆಯಲ್ಲಿದ್ದ ನಾಗರಿಕ ಸ್ವಯಂ ಸೇವಕ ಸಂಜೋಯ್ ರಾಯ್ ಎಂಬ ವ್ಯಕ್ತಿ ಪ್ರಕರಣದಲ್ಲಿ ಭಾಗಿಯಾಗಿರುವುದು ಕಂಡುಬಂದಿದೆ. ನಾಗರಿಕ ಸ್ವಯಂ ಸೇವಕ ಸಂಜೋಯ್ ರಾಯ್ ಎಂಬಾತ ವೈದ್ಯರ ಮೇಲೆ ಅತ್ಯಾಚಾರ ಎಸಗಿ ಕೊಂದಿದ್ದಾನೆ ಎಂದು ವಿಧಿವಿಜ್ಞಾನ ವರದಿಯೂ ಸೂಚಿಸಿದೆ.


ಒಬ್ಬ ವ್ಯಕ್ತಿಯ ಕೈವಾಡವನ್ನು ಡಿಎನ್‌ಎ ವರದಿಯೂ ದೃಢಪಡಿಸಿದೆ. ವೈದ್ಯೆಯನ್ನು ಹತ್ಯೆಗೈದ ಕಟ್ಟಡಕ್ಕೆ ರಾಯ್ ಪ್ರವೇಶಿಸಿದ ಸಿಸಿಟಿವಿ ದೃಶ್ಯಾವಳಿಗಳನ್ನ ಸಿಬಿಐ ಪರಿಶೀಲಿಸಿದೆ ಎಂದು ಮೂಲಗಳು ಹೇಳಿವೆ.

## ದೈಹಿಕ ಶ್ರಮದಿಂದ ಉತ್ತಮ ವ್ಯಕ್ತಿತ್ವ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಕ್ರೀಡೆ ದೈಹಿಕ, ಮಾನಸಿಕವಾಗಿ ಸದೃಢತೆಯನ್ನು ತಂದುಕೊಡುತ್ತದೆ. ಆ ದಿಸೆಯಲ್ಲಿ ವಿದ್ಯಾರ್ಥಿಗಳು ಶಿಕ್ಷಣದ ಜೊತೆ-ಗೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ ದೈಹಿಕವಾಗಿ ಶ್ರಮಿಸಿದಾಗ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಾಧ್ಯ. ಎಲ್ಲರೂ ಕ್ರೀಡಾಭಿಮಾನ ಬೆಳೆಸಿಕೊಂಡು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆಗೆ ಮುಂದಾಗುವಂತೆ ಪರಿಸರವಾದಿ ಗೋಣಿಬಸಪ್ಪ ಕೊರ್ಲಹಳ್ಳಿ ಕರೆ ನೀಡಿದರು.

ಡಂಬಳ ಗ್ರಾಮದ ಕಾಳಮ್ಮ ಹುಲಬನ್ನಿ ಸರಕಾರಿ ಹೆಣ್ಣುಮಕ್ಕಳ ಶಾಲೆಯಲ್ಲಿ ಕದಾಂಪುರ ಕ್ಲಸ್ಟರ್ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿದ ಅವರು, ದೈಹಿಕ ಶ್ರಮಕ್ಕೆ ಆದ್ಯತೆ ನೀಡದೇ ದುಶ್ಚಟಗಳ ದಾಸರಾಗುತ್ತಿರುವ ಬಹುತೇಕ ಯುವಕರು ಯಂಗ್(ಯುವಕ) ಸ್ಟಾರ್‌ಗಳಾಗದೇ ಜಂಗ್ (ತುಕ್ಕು) ಸ್ಟಾರ್‌ಗಳಾಗಿ ಪರಿವರ್ತನೆಗೊಳ್ಳುತ್ತಿರುವುದು ವಿಷಾದನೀಯ. ವಿದ್ಯಾರ್ಥಿಗಳು ದೈಹಿಕವಾಗಿ ಒಂದಿಷ್ಟು ಶ್ರಮ ವಹಿಸದಿದ್ದರೆ ಮುಂದಿನ ದಿನಗಳಲ್ಲಿ ಅದೇ ದೇಹ ತಮಗೆ ಭಾರವೆನಿಸಲಿದೆ. ಕ್ರೀಡಾ ಸಾಧನೆ ಬದಲಾಗಿ ಆರೋಗ್ಯವಂತ ಮನಸ್ಸಿದ್ದರೆ ದೈಹಿಕ ಆರೋಗ್ಯ ಚೆನ್ನಾಗಿರುತ್ತದೆ ಎಂದರು.



ಡಿಪಿಇಪಿ ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷ ಗೌಸಿದ್ದಪ್ಪ ಹಾದಿಮನಿ, ಸಿಆರ್‌ಪಿ ಎಸ್. ಎಮ್. ಪಾಟೀಲ್ ಮಾತನಾಡಿ, ಕ್ರೀಡೆ ಮತ್ತು ಪಠ್ಯ ಎರಡರಲ್ಲೂ ಉತ್ತಮ ಸಾಧನೆ ಮಾಡಬೇಕು. ಕ್ರೀಡೆಗಳಿಂದ ಶಾರೀರಿಕ ಚೈತನ್ಯ, ಮಾನಸಿಕ ಉಲ್ಲಾಸ ಸಾಧ್ಯ. ಕ್ರೀಡಾಕೂಟದಲ್ಲಿ ಸೋಲು-ಗೆಲುವು ಮುಖ್ಯವಲ್ಲ, ಭಾಗವಹಿಸುವಿಕೆಯೇ ಮುಖ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎಸ್‌ಡಿಎಮ್‌ಸಿ ಅಧ್ಯಕ್ಷೆ ಶ್ರೀದೇವಿ ಹಿರೇಮಠ, ಕದಾಂಪುರ ಶಾಲೆಯ ಮುಖ್ಯೋಪಾಧ್ಯಾಯೆ ಶಿವಲೀಲಾ ಆದಪ್ಪನವರ, ಬಿ.ಜೆ. ಪಾಟೀಲ್, ಎಸ್‌ಡಿಎಮ್‌ಸಿ ಸದಸ್ಯರಾದ ದುರ್ಗಪ್ಪ ಹರಿಜನ್, ರೇವಣಸಿದ್ದಪ್ಪ ಕರಿಗಾರ, ವೈ.ಎಸ್. ಓಸೇಕರ್, ಸಿಆರ್‌ಪಿ ಮೃತ್ಯುಂಜಯ ಪೂಜಾರ, ಮುಖ್ಯೋಪಾಧ್ಯಾಯ ಬಿ.ಜೆ. ಪಾಟೀಲ, ವಿದ್ಯಾರ್ಥಿಗಳು, ದೇಹಿಕ ಶಿಕ್ಷಕರು, ಕ್ರೀಡಾಭಿಮಾನಿಗಳು ಇದ್ದರು.

## ಕಾಯಿಪಲ್ಲೆ ಮಾರುಕಟ್ಟೆ ಮಳಿಗೆಗಳಿಗೆ ಬೀಗ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿಯ ಕಾಯಿಪಲ್ಲೆ ಮಾರುಕಟ್ಟೆಯ 5 ಮಳಿಗೆಗಳಿಗೆ ಗುರುವಾರ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ ಬೀಗ ಹಾಕಿದ್ದಾರೆ.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ಸಿದ್ದರಾಯ ಕಟ್ಟಿಮನಿ, ಕಳೆದ 3 ವರ್ಷಗಳಿಂದ ಕಾಯಿಪಲ್ಲೆ ಮಾರುಕಟ್ಟೆಯ 5 ಮಳಿಗೆಗಳ ಬಾಡಿಗೆ ಬಾಕಿಯಿತ್ತು. ಹಲವು ಬಾರಿ ನೋಟೀಸ್ ಮತ್ತು ಮೌಖಿಕವಾಗಿ ತಿಳಿಸಿದರೂ ಸಹ ಬಾಕಿ ಹಣ ತುಂಬದೇ ಇರುವುದರಿಂದ ಬೀಗ ಹಾಕಲಾಗಿದೆ. ಪಟ್ಟಣ ಪಂಚಾಯತ ಆದಾಯ ಕುಂಠಿತವಾಗುತ್ತಿರುವುದಕ್ಕೆ ಈ ಕ್ರಮ ಅನುಸರಿಸಲಾಗಿದ್ದು, ಉಳಿದಂತೆ ಪಟ್ಟಣ ಪಂಚಾಯತ ಮಳಿಗೆಗಳನ್ನು ಪಡೆದುಕೊಂಡವರು ನಿಯಮಾನುಸಾರ ಮಳಿಗೆಗಳನ್ನು ಉಪಯೋಗಿಸಬೇಕು. ಕಾಲಕಾಲಕ್ಕೆ ಪಟ್ಟಣ ಪಂಚಾಯತಿಗೆ ತುಂಬಬೇಕಾದ ಹಣವನ್ನು ತುಂಬಬೇಕೆಂದು ಹೇಳಿದರು.



## ವಾರ್ಷಿಕ ಸರ್ವ ಸಾಧಾರಣ ಮಹಾಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಹಾತಲಗೇರಿ ರಸ್ತೆಯ ನಿಸರ್ಗ ಬಡಾವಣೆಯ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನದ ಶ್ರೀ ಮೈಲಾರಲಿಂಗೇಶ್ವರ ಸೇವಾ ಟ್ರಸ್ಟ್‌ನ 2023-2024ನೇ ಸಾಲಿನ ಮೂರನೇ ವಾರ್ಷಿಕ ಸರ್ವ ಸಾಧಾರಣ ಮಹಾಸಭೆಯನ್ನು ಆಗಸ್ಟ್ 25ರ ಸಾಯಂಕಾಲ 4 ಗಂಟೆಗೆ ದೇವಸ್ಥಾನದ ಆವರಣದಲ್ಲಿ ಟ್ರಸ್ಟ್ ಅಧ್ಯಕ್ಷ ಎಸ್.ಬಿ. ಸಿದ್ದನಗೌಡ್ರ ಇವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ.

ಟ್ರಸ್ಟ್‌ನ ಗೌರವಾಧ್ಯಕ್ಷ ಎಮ್.ಎನ್. ಜಾಲಮ್ಮನವರ, ಉಪಾಧ್ಯಕ್ಷ ಎಚ್.ಎಸ್. ಕುರಿ ಉಪಸ್ಥಿತರಿರುವರು. ಸಭೆಯಲ್ಲಿ ಹೊಸದಾಗಿ ಸದಸ್ಯರನ್ನು ಹಾಗೂ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗುವುದು. ಕಾರಣ ಟ್ರಸ್ಟಿನ ಸಕಲ ಪದಾಧಿಕಾರಿಗಳು, ನಿರ್ದೇಶನ ಮಂಡಳಿಯ ಸರ್ವ ಸದಸ್ಯರು, ಮಹಾದಾನಿಗಳು, ಸಕಲ ಸದ್ಭಕ್ತ ಮಂಡಳಿಯವರು ಭಾಗವಹಿಸಿ ಸೂಕ್ತ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಟ್ರಸ್ಟ್‌ನ ಕಾರ್ಯದರ್ಶಿಗಳಾದ ವಾಯ್. ಡಿ. ಸುರಕೋಡ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.

## ಲೂಟಿ ಹೊಡೆಯುವುದೇ ಕಾಂಗ್ರೆಸ್ ಸರಕಾರದ ನೀತಿಯಾಗಿದೆ: ಡಾ.ಸಿ.ಎನ್. ಅಶ್ವತ್ಥನಾರಾಯಣ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಲೂಟಿ ಹೊಡೆಯುವುದೇ ಕಾಂಗ್ರೆಸ್ ಸರಕಾರದ ನೀತಿಯಾಗಿದೆ ಎಂದು ರಾಜ್ಯದ ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಲೂಟಿ ಹೊಡೆಯುವುದೇ ಕಾಂಗ್ರೆಸ್ ಸರಕಾರದ ನೀತಿಯಾಗಿದೆ. ಸಾಕ್ಷಿ ಸಮೇತ ಹಿಡಿದರೂ ಸಿಎಂ ಸಿದ್ದರಾಮಯ್ಯನವರು ರಾಜೀನಾಮೆ ಕೊಡುವುದಿಲ್ಲ. ಜನರ ಭಾವನೆಯನ್ನು ಇವರು ಗೌರವಿಸುವುದಿಲ್ಲ. ಕುರ್ಚಿಗೆ ಅಂಟಿಕೊಂಡೇ ಇರುವ ಭಂಡತನ ಇವರದು ಎಂದು ಟೀಕಿಸಿದ್ದಾರೆ.

ರಾಜ್ಯದ ಹಿತ ರಕ್ಷಣೆಗಾಗಿ ನಾವು ಭ್ರಷ್ಟ ಸರಕಾರದ ವಿರುದ್ಧ ಜನಜಾಗೃತಿ ಮೂಡಿಸಬೇಕು. ಪ್ರತಿನಿತ್ಯ ಹೋರಾಟ ಮಾಡುವುದೇ ನಮ್ಮ ಕರ್ತವ್ಯವಾಗಿದೆ. ಇವರು ಸಂವಿಧಾನ ಕೈಯಲ್ಲಿ ಹಿಡಿದು ಹಕ್ಕುಗಳ ಬಗ್ಗೆ ಮಾತನಾಡುತ್ತಾರೆ. ಆದರೆ ತಮ್ಮ ಕರ್ತವ್ಯ, ಜವಾಬ್ದಾರಿಗಳ ಕುರಿತು ಮಾತನಾಡುವುದಿಲ್ಲ. ಸಂವಿಧಾನದ ಆಶಯಗಳನ್ನು ಗೌರವಿಸುವುದಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

### ಶ್ರಾವಣ ತಪೋನುಷ್ಠಾನ, ಪುರಾಣ ಪ್ರವಚನ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು


# ಸತ್ಯದೊಂದಿಗೆ ಹೆಜ್ಜೆ ಹಾಕುವುದು ಶ್ರೇಷ್ಠ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಹೂವು ಒಂದೇ ದಿನ ಬಾಳಿದರೂ ನಾಲ್ಕು ಜನಕ್ಕೆ ಪರಿಮಳ ಕೊಟ್ಟು ಹೋಗುತ್ತದೆ. ಮನುಷ್ಯ ಸಹ ಸದ್ಗುಣ ಸಂಪಾದಿಸಿ ಬಾಳಿದರೆ ಬದುಕು ಉಜ್ವಲವಾಗುತ್ತದೆ. ಸಾಧನೆಯ ಗೆಲುವು ದುಡಿಯುವ ಕೈಗಳಿಂದ ಬರುತ್ತದೆಯೇ ಹೊರತು ಅಂಗೈನ ಅದೃಷ್ಟ ರೇಖೆಗಳಿಂದಲ್ಲ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ರಂಭಾಪುರಿ ಪೀಠದಲ್ಲಿ ಕೈಕೊಂಡ ಶ್ರಾವಣ ತಪೋನುಷ್ಠಾನ ಹಾಗೂ ಪುರಾಣ ಪ್ರವಚನ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಒಳ್ಳೆಯದನ್ನೇ ಯೋಚನೆ ಮಾಡಿದರೆ ಒಳ್ಳೆಯದೇ ಆಗುತ್ತದೆ. ನಮ್ಮ ನಡೆ-ನುಡಿ ಶುದ್ಧವಾಗಿದ್ದರೆ ಈ ಜಗತ್ತು ತುಂಬಾ ಸುಂದರವಾಗಿ ಕಾಣುತ್ತದೆ. ಸಮಯದ ಜೊತೆ ನಡೆಯದೇ ಸತ್ಯದ ಜೊತೆ ಹೆಜ್ಜೆ ಹಾಕುವುದು ಶ್ರೇಷ್ಠ. ಬೇರೆಯವರಿಗೆ ದಾರಿ ತೋರಿಸಲು ನೀನು ದೀಪ ಬೆಳಗಿದರೆ ಅದು ನಿನ್ನ ದಾರಿಗೆ ಬೆಳಕು ಚೆಲ್ಲುತ್ತದೆ. ಗೆದ್ದವರು ಸಂತೋಷದಿಂದ ಸೋತವರು ಯೋಚಿಸುತ್ತಾ ಇರುತ್ತಾರೆ. ಆದರೆ ಸೋಲು-ಗೆಲುವು ಶಾಶ್ವತ ಅಲ್ಲವೆಂದು ತಿಳಿದು ಬಾಳಿದವರು ಮಹಾತ್ಮರಾಗಿ ಜಗಕ್ಕೆ ಬೆಳಕು ತೋರಿದರು. ಶ್ರೀ ಜಗದ್ಗುರು ರೇಣುಕಾಚಾರ್ಯರು ಅತ್ಯಮೂಲ್ಯವಾದ ಮಾನವ ಜೀವನದ ಸಾಫಲ್ಯಕ್ಕಾಗಿ ತೋರಿದ ದಾರಿ ಹಾಗೂ ಕೊಟ್ಟ ಸಂದೇಶ ಸರ್ವರಿಗೂ ಸುಖಶಾಂತಿ ಬದುಕಿಗೆ ಆಶಾಕಿರಣವಾಗಿದೆ ಎಂದರು.



'ಶ್ರೀ ಜಗದ್ಗುರು ರೇಣುಕ ವಿಜಯ' ಪುರಾಣ ಪ್ರವಚನ ಮಾಡಿದ ಉಟಗಿ ಹಿರೇಮಠದ ಶಿವಪ್ರಸಾದ್ ದೇವರು ಮಾತನಾಡಿ, ಆಕಾಶದಿಂದ ಮಳೆ ಸುರಿಯುತ್ತದೆ ಎಂಬ ನಂಬಿಕೆಯಿಂದ ಗಿಡ-ಮರಗಳು ಬದುಕುತ್ತವೆ. ಹಾಗೆಯೇ ನಮಗೆ ಒಳ್ಳೆಯ ಕಾಲ ಬಂದೇ ಬರುತ್ತದೆ ಎಂಬ ದೃಢ ನಂಬಿಕೆಯಿಂದ ನಡೆದರೆ ಬದುಕು ಸಾರ್ಥಕಗೊಳ್ಳುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜಗತ್ಕಲ್ಯಾಣ ಮಹತ್ಕಾರ್ಯಗಳು ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಭದ್ರ ಬುನಾದಿಯಾಗಿವೆ ಎಂದರು.

ನೇತೃತ್ವ ವಹಿಸಿದ ಹುಡಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಬಿಲ್ಲು ಬಾಗಿದರೆ ಮಾತ್ರ ಬಾಣ ಮುಂದೆ ಹೋಗುತ್ತದೆ. ಅದೇ ರೀತಿ ದೇಹ ಬಾಗಿದಾಗ ಮಾತ್ರ ಜೀವನ ಮುಂದೆ ಸಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಮಾನವೀಯತೆಯ ಆದರ್ಶ ಚಿಂತನಗಳು ನಮ್ಮೆಲ್ಲರ ಬಾಳಿಗೆ ಬೆಳಕು ತೋರುತ್ತವೆ ಎಂದರು.

ಈ ಪವಿತ್ರ ಸಮಾರಂಭದಲ್ಲಿ ಆಲಮೇಲ ಚಂದ್ರಶೇಖರ ಶ್ರೀಗಳು, ತಡವಲಗಾ ರಾಚೋಟೇಶ್ವರ ಶ್ರೀಗಳು, ಯಂಕಂಚಿ ರುದ್ರಮುನಿ ಶ್ರೀಗಳು, ಗುಂಡನಾಳ ಗುರುಲಿಂಗ ದೇವರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ದಾವಣಗೆರೆ ಡಾ. ಎಸ್.ಕೆ. ಕಾಳಪ್ಪನವರ, ಪತ್ರಕರ್ತ ಪ್ರಶಾಂತ ರಿಪ್ಪನ್‌ಪೇಟೆ, ರುದ್ರಯ್ಯ ದೊಡ್ಡಬ್ಬಿಗೇರಿ, ರಾಣೆಬೆನ್ನೂರಿನ ಸಿದ್ಧಲಿಂಗಯ್ಯ ಹಿರೇಮಠ, ಬಮ್ಮನಹಳ್ಳಿ ವೀರಣ್ಣ, ಬಾಳೆಹೊನ್ನೂರು ಐಟಿಐ ಉಮೇಶ್ ಸಮಾರಂಭದಲ್ಲಿ ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಆಶೀರ್ವಾದ ಪಡೆದರು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ವಿಠಲಾಪುರ ಹಿರೇಮಠದ ಗಂಗಾಧರಸ್ವಾಮಿ ಅವರಿಂದ ಭಕ್ತಿಗೀತೆ ಜರುಗಿತು. ಶಿಕ್ಷಕ ವೀರೇಶ ಕುಲಕರ್ಣಿ ನಿರೂಪಿಸಿದರು.

'ಶ್ರೀ ಜಗದ್ಗುರು ರೇಣುಕ ವಿಜಯ' ಪುರಾಣ ಪ್ರವಚನ ಮಾಡಿದ ಉಟಗಿ ಹಿರೇಮಠದ ಶಿವಪ್ರಸಾದ್ ದೇವರು ಮಾತನಾಡಿ, ಆಕಾಶದಿಂದ ಮಳೆ ಸುರಿಯುತ್ತದೆ ಎಂಬ ನಂಬಿಕೆಯಿಂದ ಗಿಡ-ಮರಗಳು ಬದುಕುತ್ತವೆ. ಹಾಗೆಯೇ ನಮಗೆ ಒಳ್ಳೆಯ ಕಾಲ ಬಂದೇ ಬರುತ್ತದೆ ಎಂಬ ದೃಢ ನಂಬಿಕೆಯಿಂದ ನಡೆದರೆ ಬದುಕು ಸಾರ್ಥಕಗೊಳ್ಳುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಜಗತ್ಕಲ್ಯಾಣ ಮಹತ್ಕಾರ್ಯಗಳು ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಭದ್ರ ಬುನಾದಿಯಾಗಿವೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka